ಸಂಪುಟ : 11 ಸಂಚಿಕೆ: 69 ಪುಟ : 4+2 ಬೆಲೆ: 3.00 ಬುಧವಾರ ಏಪ್ರಿಲ್ 15 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 69 Pages : 4+2 Price : 3.00 Wednesday April 15 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಡಾ. ಅಂಬೇಡ್ಕರ್-ಡಾ. ಬಾಬುಜಿ ಜಯಂತಿ ಅದ್ಧೂರಿ ಆಚರಣೆಯಲ್ಲಿ ಸಾಧನೆಗೆ ಬಡತನ ಅಡ್ಡಿಯಲ್ಲ ಎಂದ ಎಸ್.ವಿ. ಸಂಕನೂರ

# ಸಮಾನತೆ ಆಧಾರಿತ ಸಮಾಜ ನಿರ್ಮಾಣಕ್ಕೆ ಕರೆ



"ಶಿಕ್ಷಣ-ಸಂಘಟನೆ-ಹೋರಾಟ ಎಂಬ ಅಂಬೇಡ್ಕರ್ ಅವರ ತತ್ವಗಳನ್ನು ಅಳವಡಿಸಿಕೊಂಡಾಗ ಮಾತ್ರ ಸಬಲ ಸಮಾಜ ನಿರ್ಮಾಣ ಸಾಧ್ಯ."

**-ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಅಂಬೇಡ್ಕರ್ ಹಾಗೂ ಡಾ. ಬಾಬುಜಿ ಅವರ ತತ್ವ-ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬಡತನ ಸಾಧನೆಗೆ ಅಡ್ಡಿಯಾಗುವುದಿಲ್ಲ ಎಂಬುದನ್ನು ಅವರ ಜೀವನವೇ ಸಾಬೀತುಪಡಿಸುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಗದಗ-ಬೆಟಗೇರಿ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಡಾ. ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಬಡವರು ಹಾಗೂ ಹಿಂದುಳಿದ ವರ್ಗಗಳ ಉನ್ನತಿಗಾಗಿ ತಮ್ಮ ಜೀವನವನ್ನೇ ಸಮರ್ಪಿಸಿ ಸಮಾನತೆ ಆಧಾರಿತ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಸಂವಿಧಾನವನ್ನು ರೂಪಿಸಿ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕುಗಳನ್ನು ಕಲ್ಪಿಸಿದ ಮಹಾನ್ ವ್ಯಕ್ತಿತ್ವ ಅವರದು ಎಂದು ಅವರು ಪ್ರಶಂಸಿಸಿದರು.

ಅಂಬೇಡ್ಕರ್ ಹಾಗೂ ಬಾಬುಜಿ ಅವರ ಭಾವಚಿತ್ರಗಳ ಮೆರವಣಿಗೆ ನಗರಸಭೆ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರಿಂದ ಪ್ರಾರಂಭವಾಗಿ ಮಹಾತ್ಮಾ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್, ಟಾಂಗಾಕೂಟ್, ಬಸವೇಶ್ವರ ಸರ್ಕಲ್, ಗುಜ್ಜರಬಸ್ತಿ, ಮುಳಗುಂದ ನಾಕಾ ಮಾರ್ಗವಾಗಿ ಅಂಬೇಡ್ಕರ್ ಭವನಕ್ಕೆ ತಲುಪಿತು.

ಅರ್ಥಶಾಸ್ತ್ರ, ಇತಿಹಾಸ ಹಾಗೂ ಮನಶಾಸ್ತ್ರ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಪಾಂಡಿತ್ಯ ಹೊಂದಿದ್ದ ಅಂಬೇಡ್ಕರ್ ಅವರನ್ನು ಸಂವಿಧಾನ ರಚನಾ ಸಮಿತಿಯ ಮುಖ್ಯಸ್ಥರಾಗಿ ನೇಮಿಸಲಾಗಿತ್ತು. ಜಾತಿ ವ್ಯವಸ್ಥೆ ನಿರ್ಮೂಲನೆಗೆ ಅವರು ಕೈಗೊಂಡ ಹೋರಾಟ ಶ್ಲಾಘನೀಯ ಎಂದರು.

ನಿವೃತ್ತ ಮುಖ್ಯೋಪಾಧ್ಯಾಯ ಹಾಗೂ ರಾಷ್ಟ್ರ ಪ್ರಶಸ್ತಿ ವಿಜೇತ ಎಸ್.ಎನ್. ಬಳ್ಳಾರಿ ಮಾತನಾಡಿ, ಬಾಲ್ಯದಿಂದಲೇ ಅಸ್ಪೃಶ್ಯತೆ ವಿರುದ್ಧ ಹೋರಾಡಿದ ಅಂಬೇಡ್ಕರ್ ಮಹಾನ್ ನಾಯಕರು ಎಂದು ಹೇಳಿದರು. ಅವರ ಜೀವನ ಹೋರಾಟ ಮತ್ತು ಶಿಕ್ಷಣದ ಮೂಲಕ ಸಾಧನೆಯ ಪ್ರೇರಣೆಯಾಗಿದೆ ಎಂದು ವಿವರಿಸಿದರು.

ಪ್ರೊ. ಡಿ.ಜಿ. ಜೋಗಣ್ಣನವರ ಅವರು ಡಾ. ಬಾಬು ಜಗಜೀವನ್ ರಾಮ್ ಕುರಿತು ಮಾತನಾಡಿ, ಅವರು ಮೃದುಸ್ವಭಾವದ ನಾಯಕರು ಹಾಗೂ ದೀನದಲಿತರ ಪರ ಹೋರಾಟಗಾರರಾಗಿದ್ದರು ಎಂದರು. ಇಬ್ಬರೂ ಮಹನೀಯರು ಅಸ್ಪೃಶ್ಯತೆ ನಿರ್ಮೂಲನೆಗೆ ಸ್ಫೂರ್ತಿದಾಯಕ ವ್ಯಕ್ತಿತ್ವಗಳಾಗಿದ್ದಾರೆ ಎಂದು ಹೇಳಿದರು.

ಕಾನೂನು ವಿದ್ಯಾರ್ಥಿ ಮಣಿಕಂಠ ಹಾದಿಮನಿ ಮಾತನಾಡಿ, ಅಂಬೇಡ್ಕರ್ ಅವರು ಕೇವಲ ದಲಿತ ನಾಯಕರಲ್ಲ, ವಿಶ್ವ ಮಟ್ಟದ ನಾಯಕರು ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಕುರಿತ ಪ್ರಬಂಧ ಸಂಕಲನವನ್ನು ಬಿಡುಗಡೆ ಮಾಡಲಾಗಿದ್ದು, ಉತ್ತಮ ಕಾರ್ಯನಿರ್ವಹಿಸಿದ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸಂವಿಧಾನ ಪ್ರಸ್ತಾವನೆ ಬೋಧಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನ ಕಾರ್ಯಕ್ರಮ ನಿರೂಪಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಸೇವಾ ಭದ್ರತೆ, ಸಮಾನ ವೇತನಕ್ಕೆ ಆಗ್ರಹಿಸಿ ಹೋರಾಟ

# ಇಂದು ಅತಿಥಿ ಉಪನ್ಯಾಸಕರ ಪ್ರತಿಭಟನೆ



- *) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಹರಿಯಾಣ ಮಾದರಿಯಲ್ಲಿ ಸೇವಾ ಭದ್ರತೆ ಒದಗಿಸಬೇಕು
- *) ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು
- *) ಮುಂಬರುವ ನೇಮಕಾತಿಯಲ್ಲಿ 50% ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡಬೇಕು
- *) ಎಲ್ಲಾ ಅತಿಥಿ ಉಪನ್ಯಾಸಕರಿಗೆ 12 ತಿಂಗಳ ವೇತನ ನೀಡಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ 15 ವರ್ಷಗಳಿಂದ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ನಮಗೆ ಸರ್ಕಾರದ ಹೊಸ ನೇಮಕಾತಿ ನಿರ್ಧಾರದಿಂದ ಅನ್ಯಾಯವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಒಂದು ದಿನದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಯಶವಂತ್ ಆರೇರ ತಿಳಿಸಿದ್ದಾರೆ.

ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ 900ಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿ ಮಾಡಲು ಮುಂದಾಗಿದ್ದು, ಇದರಿಂದ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುವ ಪರಿಸ್ಥಿತಿ ಎದುರಿಸುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.


ರಾಜ್ಯ ಕಾಂಗ್ರೆಸ್ ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಅತಿಥಿ ಉಪನ್ಯಾಸಕರನ್ನು ಕಾಯಂಗೊಳಿಸುವ ಭರವಸೆ ನೀಡಲಾಗಿತ್ತು. ಆದರೆ ಈಗ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಅತಿಥಿ ಉಪನ್ಯಾಸಕರ ಬದುಕಿಗೆ ಧಕ್ಕೆ ಉಂಟುಮಾಡಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿರೋಧ ಪಕ್ಷದಲ್ಲಿದ್ದಾಗ ಅತಿಥಿ ಉಪನ್ಯಾಸಕರ ಪರ ಮಾತನಾಡಿದ್ದರು. ಇದೀಗ ನೇಮಕಾತಿಗೆ ಮುಂದಾಗಿರುವುದು ಸರಿಯಲ್ಲ. ಮೊದಲು ಸೇವಾ ಭದ್ರತೆ ನೀಡಬೇಕು, ಇಲ್ಲವಾದರೆ ಕಾನೂನು ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಅನುಭವಸಂಪನ್ನ ಅತಿಥಿ ಉಪನ್ಯಾಸಕರಿಗೆ ಹೊಸ ನೇಮಕಾತಿಯಲ್ಲಿ ಆದ್ಯತೆ ನೀಡಬೇಕು. ಕನ್ನಡ ವಿಭಾಗದ ಉಪನ್ಯಾಸಕರಿಗೆ 10 ತಿಂಗಳ ಪೂರ್ಣ ವೇತನ ಸೇರಿದಂತೆ ನ್ಯಾಯಸಮ್ಮತ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸಿಲ್ಲ ಎಂದು ಅವರು ಆರೋಪಿಸಿದರು.

ಈ ಸಂದರ್ಭದಲ್ಲಿ ಪ್ರವೀಣಕುಮಾರ ತೋಟಗೇರ, ಪ್ರದೀಪಕುಮಾರ ಕುರಹಟ್ಟಿ, ಪ್ರವೀಣಕುಮಾರ ಬೇವಿನಕಟ್ಟಿ, ಅಶೋಕ ಬಂಕಾಪೂರ, ಶಿವಪ್ರಸಾದ ಹುಯಿಲಗೋಳ, ವಿದ್ಯಾಶ್ರೀ ಹೂಗಾರ, ಆಸ್ಮಾ ಗದ್ವಾಲ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

ನರಸಾಪೂರದಲ್ಲಿ ಮಹಾಸಂಯೋಜನೆ - ವಿವಿಧ ಮಠಾಧೀಶರ ಸಾನ್ನಿಧ್ಯ, ನೋಂದಣಿಗೆ ಆಹ್ವಾನ

# ಮೇ.1ರಂದು ಉಚಿತ ಶಿವದೀಕ್ಷೆ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ (ರಿ) ನರಸಾಪೂರ ಹಾಗೂ ಅಖಿಲ ಭಾರತ ಜಂಗಮ ಸೇವಾ ಸಮಿತಿ (ರಿ), ಗದಗ ಇವರ ಸಂಯುಕ್ತಾಶ್ರಯದಲ್ಲಿ ಮೇ 1ರಂದು ಉಚಿತ ಶಿವದೀಕ್ಷೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಡಾ. ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದ್ದಾರೆ.

ನೋಂದಣಿಗಾಗಿ ಮಂಜುನಾಥ ಹಳ್ಳೂರಮಠ (99023 54341), ಮೃತ್ಯುಂಜಯ ಬಿಕ್ಷಾವತಿಮಠ (97405 69338), ಕುಮಾರ ದೇವದುರ್ಗಮಠ (78294 45529), ತೋಟಯ್ಯ ಗುಡ್ಡಿಮಠ (99011 32516), ವೀರಯ್ಯ ಹೊಸಮಠ (95383 11525) ಇವರನ್ನು ಸಂಪರ್ಕಿಸಬಹುದು.

ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಂಗಮ ಮಕ್ಕಳಿಗೆ ಅಯ್ಯಾಚಾರ ಹಾಗೂ ಇತರೆ ಎಲ್ಲಾ ಜನಾಂಗದ ಮಕ್ಕಳಿಗೆ ಲಿಂಗದೀಕ್ಷೆ ನೀಡಲಾಗುತ್ತದೆ. ಶಿವದೀಕ್ಷೆ ಪಡೆಯಲು ಇಚ್ಛಿಸುವವರು ಏಪ್ರಿಲ್ 25ರೊಳಗೆ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ನಾಡೋಜ ಡಾ. ಅನ್ನದಾನೇಶ್ವರ ಮಹಾಶಿವಯೋಗಿಗಳು ವಹಿಸಿಕೊಳ್ಳಲಿದ್ದಾರೆ.

ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು (ಬನ್ನಿಕೊಪ್ಪ), ಶಿವಯೋಗೀಶ್ವರ ಮಹಾಸ್ವಾಮಿಗಳು (ಗುಡದಾನ್ವೇರಿ-ಸೊರಟೂರ), ಶ್ರೀ ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು (ಹಿರೇವಡ್ಡಟ್ಟಿ), ಶ್ರೀ ▸▸ 4ನೇ ಪುಟಕ್ಕೆ

ಲಕ್ಷ್ಮೇಶ್ವರದಲ್ಲಿ ಅಂಬೇಡ್ಕರ್-ಜಗಜೀವನ್ ರಾಮ್ ಜಯಂತಿ ಆಚರಣೆ

# ಅಂಬೇಡ್ಕರ್ ತತ್ವಗಳಿಂದ ನವ ಭಾರತ ನಿರ್ಮಾಣಕ್ಕೆ ಬದ್ಧರಾಗೋಣ

"ಸಾಮಾಜಿಕ ನ್ಯಾಯಕ್ಕಾಗಿ ಸಂವಿಧಾನ ರೂಪಿಸಿ ಬಲಿಷ್ಠ ಭಾರತ ನಿರ್ಮಾಣದ ಕನಸನ್ನು ಸಾಕಾರಗೊಳಿಸಲು ಅಂಬೇಡ್ಕರ್ ತಮ್ಮ ಜೀವನವನ್ನೇ ಸಮರ್ಪಿಸಿಕೊಂಡರು. ಮಾನವೀಯ ಮೌಲ್ಯಗಳಾದ ಸ್ನೇಹ, ಪ್ರೀತಿ ಹಾಗೂ ವಿಶ್ವಾಸವನ್ನು ಸಾರಿದ ಅವರ ತತ್ವ-ಸಿದ್ಧಾಂತಗಳು ಇಂದಿಗೂ ದಾರಿದೀಪವಾಗಿವೆ."

**- ಗುರುನಾಥ ದಾನಪ್ಪನವರ.** ಮುಖಂಡರು.

ಬೆಳಿಗ್ಗೆ ಪಟ್ಟಣದ ಶ್ರೀ ಸೋಮೇಶ್ವರ ತೇರಿನ ಮನೆ ಆವರಣದಿಂದ ಅಂಬೇಡ್ಕರ್ ಮತ್ತು ಜಗಜೀವನ್ ರಾಮ್ ಅವರ ಭಾವಚಿತ್ರಗಳೊಂದಿಗೆ ಭವ್ಯ ಮೆರವಣಿಗೆ ಪ್ರಾರಂಭವಾಗಿ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಶಿಗ್ಲಿ ನಾಕಾ, ಪಾದಗಟ್ಟಿ, ಹಾವಳಿ ಆಂಜನೇಯ ದೇವಸ್ಥಾನ, ವಿದ್ಯಾರಣ್ಯ ಸರ್ಕಲ್ ಮಾರ್ಗವಾಗಿ ಚನ್ನಮ್ಮನವನದಲ್ಲಿ ಸಮಾಪ್ತಿಗೊಂಡಿತು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ವರಿಗೂ ಸಮಬಾಳು ಎಂಬ ತತ್ವದಡಿ ದೇಶದ ಎಲ್ಲಾ ವರ್ಗ, ಜಾತಿ ಹಾಗೂ ಧರ್ಮಗಳ ಜನರಿಗೆ ಸಮಾನ ನ್ಯಾಯ ಕಲ್ಪಿಸಿದ ಅಸಾಮಾನ್ಯ ಪ್ರೇರಕ ಶಕ್ತಿ ಭಾರತರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಎಂದು ತಹಸೀಲ್ದಾರ್ ಧನಂಜಯ ಎಂ ಹೇಳಿದರು.

ಪಟ್ಟಣದ ಚನ್ನಮ್ಮನವನ ಕಲ್ಯಾಣಮಂಟಪದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ್, ಪುರಸಭೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಅಂಬೇಡ್ಕರ್ ಅವರ 135ನೇ ಹಾಗೂ ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶತಮಾನಗಳಿಂದ ಶೋಷಣೆಗೆ ಒಳಗಾದವರಿಗೆ ಶಿಕ್ಷಣದ ಮೂಲಕ ಶಕ್ತಿಯನ್ನೀಡಿ ಸಮಾನ ಅವಕಾಶಗಳನ್ನು ಕಲ್ಪಿಸಿ ಸಾಮಾಜಿಕ ಬದಲಾವಣೆಗೆ ದಾರಿ ತೋರಿದ ಮಹಾನ್ ವ್ಯಕ್ತಿತ್ವ ಅಂಬೇಡ್ಕರ್ ಅವರದು. ಅವರು ಕೇವಲ ವ್ಯಕ್ತಿಯಲ್ಲ, ನವಭಾರತದ ನಿರ್ಮಾಣಕ್ಕೆ ಪ್ರೇರಕ ಶಕ್ತಿಯಾಗಿದ್ದಾರೆ. ▸▸ 4ನೇ ಪುಟಕ್ಕೆ



ಬಿಜೆಪಿ ಕಚೇರಿಯಲ್ಲಿ ಡಾ. ಅಂಬೇಡ್ಕರ್-ಜಗಜೀವನ್ ರಾಮ್ ಜಯಂತಿ ಆಚರಣೆ

# ಸಂವಿಧಾನ ಶಿಲ್ಪಿಗೆ ಗೌರವ ನಮನ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಚೇರಿಯಲ್ಲಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಜಗಜೀವನ್ ರಾಮ್ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಡಾ. ಅಂಬೇಡ್ಕರ್ ಅವರು ಶಿಕ್ಷಣವನ್ನು ಜೀವನದ ಪ್ರಮುಖ ಅಸ್ತ್ರವಾಗಿ ತೋರಿಸಿದ ಮಹಾನ್ ನಾಯಕರು. ಜಾತಿ ವ್ಯವಸ್ಥೆಯನ್ನು ವಿರೋಧಿಸಿ ಸಮಾನತೆಯ ಸಮಾಜ ನಿರ್ಮಾಣಕ್ಕಾಗಿ ಹೋರಾಡಿದವರು. ಮಹಿಳೆಯರ ರಕ್ಷಣೆಗೆ ಹಾಗೂ ಸಮಾನ ಹಕ್ಕುಗಳಿಗಾಗಿ ಶ್ರಮಿಸಿದವರು ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಅಂಬೇಡ್ಕರ್ ಅವರು ಭಾರತಕ್ಕೆ ಸಂವಿಧಾನ ನೀಡಿ ಪ್ರತಿಯೊಬ್ಬ ನಾಗರಿಕನಿಗೂ ಬದುಕುವ ಹಕ್ಕು ಒದಗಿಸಿದ ಮಹಾನ್ ವ್ಯಕ್ತಿ.

"ಶಿಕ್ಷಣ ಮತ್ತು ಸಮಾನತೆ ಎಂಬ ಅಸ್ತ್ರಗಳಿಂದ ಅಂಬೇಡ್ಕರ್ ಅವರು ಸಮಾಜ ಪರಿವರ್ತನೆಗೆ ದಾರಿತೋರಿದರು."

**- ಎಸ್.ವಿ. ಸಂಕನೂರ.**

ಅವರ ಜೀವನಕ್ಕೆ ಸಂಬಂಧಿಸಿದ ಐದು ಪ್ರಮುಖ ಸ್ಥಳಗಳನ್ನು ಪ್ರಧಾನಿ ನರೇಂದ್ರ ಮೋದಿ ಅಭಿವೃದ್ಧಿಪಡಿಸಿರುವುದು ಶ್ಲಾಘನೀಯ ಎಂದರು.

ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ ಮಾತನಾಡಿ, ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಜೀವನದಲ್ಲಿ ಜಾತಿ ವ್ಯವಸ್ಥೆ ಅತಿದೊಡ್ಡ ತಡೆಗೋಡೆಯಾಗಿತ್ತು. ಅಸ್ಪೃಶ್ಯತೆಯನ್ನು ಎದುರಿಸಿ ಅವರು ಸಾಮಾಜಿಕ, ರಾಜಕೀಯ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ನೀಡಿದ ಕೊಡುಗೆ ಅಪಾರವಾಗಿದೆ. ಅವರ ತತ್ವಾದರ್ಶಗಳು ಎಲ್ಲರಿಗೂ ಮಾರ್ಗದರ್ಶಿಯಾಗಿವೆ ಎಂದರು.

ನಗರ ▸▸ 3ನೇ ಪುಟಕ್ಕೆ

# 3ನೇ ಮಹಾಯುದ್ಧದ ಭೀತಿ: ಇರಾನ್ ಸಜ್ಜಾ..?

## ಮಧ್ಯಪ್ರಾಚ್ಯದ ಉದ್ವಿಗ್ನತೆ, ಜಾಗತಿಕ ರಾಜಕೀಯದ ತಿರುವು – ಡಾ. ಜಲಾಲುದ್ದೀನ್ ಅಕ್ಬರ್ ವಿಶ್ಲೇಷಣೆ

ಮಧ್ಯಪ್ರಾಚ್ಯದಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಉದ್ವಿಗ್ನತೆ ಜಾಗತಿಕ ಮಟ್ಟದಲ್ಲಿ ಆತಂಕವನ್ನು ಉಂಟುಮಾಡುತ್ತಿದೆ. ಅಮೆರಿಕಾ ಮತ್ತು ಇಸ್ರೇಲ್‌ನ ರಾಜಕೀಯ ಹಾಗೂ ಸೈನಿಕ ಕ್ರಮಗಳಿಗೆ ಪ್ರತಿಯಾಗಿ ಇರಾನ್ ತೆಗೆದುಕೊಳ್ಳುತ್ತಿರುವ ಕಠಿಣ ನಿಲುವು, ಭವಿಷ್ಯದಲ್ಲಿ ದೊಡ್ಡ ಯುದ್ಧಕ್ಕೆ ಕಾರಣವಾಗಬಹುದೇ ಎಂಬ ಪ್ರಶ್ನೆಯನ್ನು ಹುಟ್ಟಿಸಿದೆ.

ಈ ಹಿನ್ನೆಲೆಯಲ್ಲಿ ಖ್ಯಾತ ಮುಸ್ಲಿಂ ಜ್ಯೋತಿಷಿ "ವೈದ್ಯ ಜ್ಯೋತಿಷ್ಯರತ್ನ" ಡಾ. ಜಲಾಲುದ್ದೀನ್ ಅಕ್ಬರ್ ಅವರು ನೀಡಿರುವ ವಿಶ್ಲೇಷಣೆ ಚರ್ಚೆಗೆ ಗ್ರಾಸವಾಗಿದೆ. ಅವರ ಅಭಿಪ್ರಾಯದಂತೆ, ಇತ್ತೀಚಿನ ಬೆಳವಣಿಗೆಗಳು ಕೇವಲ ಪ್ರಾದೇಶಿಕ ಸಂಘರ್ಷವಲ್ಲ, ಜಾಗತಿಕ ಮಟ್ಟದ ಮಹಾಯುದ್ಧಕ್ಕೆ ಮುನ್ನುಡಿಯಾಗುವ ಸಾಧ್ಯತೆ ಇದೆ.

ಇರಾನ್ ತನ್ನ ಸ್ವಾಭಿಮಾನ ಮತ್ತು ಭದ್ರತೆಯ ವಿಚಾರದಲ್ಲಿ ಯಾವುದೇ ದೇಶಕ್ಕೂ ತಲೆಬಾಗದ ನಿಲುವು ತಾಳಿದೆ.





ಈ ಹಿನ್ನೆಲೆಯಲ್ಲಿ, ಅಮೆರಿಕಾ ಮತ್ತು ಇಸ್ರೇಲ್ ಜೊತೆಗಿನ ತಕರಾರುಗಳು ತೀವ್ರಗೊಳ್ಳುವ ಸಂಭವ ಇದೆ. ಯುದ್ಧದ ಸೂಚನೆಗಳು, ಪರಸ್ಪರ ಎಚ್ಚರಿಕೆಗಳು ಮತ್ತು ವಿಫಲವಾದ ಶಾಂತಿ ಸಂಧಾನ ಪ್ರಯತ್ನಗಳು ಪರಿಸ್ಥಿತಿಯನ್ನು ಇನ್ನಷ್ಟು ಸಂಕೀರ್ಣಗೊಳಿಸುತ್ತಿವೆ.

"ಮಧ್ಯಪ್ರಾಚ್ಯದ ಉದ್ವಿಗ್ನತೆ ನಿಯಂತ್ರಣ ತಪ್ಪಿದರೆ, ಅದು ಜಾಗತಿಕ ಮಟ್ಟದಲ್ಲಿ ಭಾರೀ ಪರಿಣಾಮ ಬೀರುವ ಸಾಧ್ಯತೆ ಇದೆ," ಎಂದು ಡಾ. ಜಲಾಲುದ್ದೀನ್ ಅಕ್ಬರ್ ವಿಶ್ಲೇಷಿಸಿದ್ದಾರೆ. ಇದರೊಂದಿಗೆ, ಜಾಗತಿಕ ರಾಜಕೀಯದಲ್ಲಿ ಮಹತ್ವದ ಬದಲಾವಣೆಗಳು ಸಂಭವಿಸಬಹುದು ಎಂಬ ಸೂಚನೆಗಳು ಕಾಣಿಸುತ್ತಿವೆ. ಶಕ್ತಿಶಾಲಿ ರಾಷ್ಟ್ರಗಳ ನಡುವಿನ ಅಸಮ್ಮತಿ, ಪರಸ್ಪರ ಅವಿಶ್ವಾಸ ಮತ್ತು ಸೈನಿಕ ಸಿದ್ಧತೆಗಳು ಈ ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸುತ್ತಿವೆ.

ಆದಾಗ್ಯೂ, ಇಂತಹ ಭವಿಷ್ಯವಾಣಿಗಳನ್ನು ನಿಖರವಾಗಿ ಅರ್ಥಮಾಡಿಕೊಳ್ಳುವುದು ಅಗತ್ಯ. ಇತಿಹಾಸ ಹೇಳುವುದೇನೆಂದರೆ, ಹಲವಾರು ಬಾರಿ ಉದ್ವಿಗ್ನ ಪರಿಸ್ಥಿತಿಗಳು ಕೊನೆಯ ಕ್ಷಣದಲ್ಲಿ ರಾಜತಾಂತ್ರಿಕ ಮಾತುಕತೆಯ ಮೂಲಕ ಶಮನಗೊಂಡಿವೆ.

ಹೀಗಾಗಿ, ಮಧ್ಯಪ್ರಾಚ್ಯದ ಬೆಳವಣಿಗೆಗಳು ಯಾವ ದಿಕ್ಕಿನಲ್ಲಿ ಸಾಗುತ್ತವೆ ಎಂಬುದನ್ನು ಗಮನದಿಂದ ವೀಕ್ಷಿಸುವುದು ಅಗತ್ಯವಾಗಿದೆ. ಮಹಾಯುದ್ಧದ ಭೀತಿ ಉಂಟಾದರೂ, ಶಾಂತಿ ಸಾಧ್ಯತೆಗಳು ಇನ್ನೂ ಸಂಪೂರ್ಣವಾಗಿ ಮುಚ್ಚಲ್ಪಟ್ಟಿಲ್ಲ ಎಂಬುದೇ ತಜ್ಞರ ಅಭಿಪ್ರಾಯವಾಗಿದೆ.

## ಕಾವ್ಯಾ ಅಬ್ಬಿಗೇರಿ ಕವಿವಿ ಖೋ-ಖೋ ತಂಡಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನ ಬಿ.ಎ. ದ್ವಿತೀಯ ಸೆಮಿಸ್ಟರ್ ವಿದ್ಯಾರ್ಥಿನಿ ಕಾವ್ಯಾ ಶಿವಕುಮಾರ ಅಬ್ಬಿಗೇರಿ ಅವರು ಕರ್ನಾಟಕ ವಿಶ್ವವಿದ್ಯಾಲಯ ಖೋ-ಖೋ ತಂಡಕ್ಕೆ ಆಯ್ಕೆಯಾಗಿದ್ದಾರೆ ಎಂದು ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ತಿಳಿಸಿದ್ದಾರೆ.

ಇತ್ತೀಚೆಗೆ ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ನಡೆದ ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಖೋ-ಖೋ ಟೂರ್ನಿಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿದ ಕಾವ್ಯಾ ತಮ್ಮ ಕ್ರೀಡಾ ಪ್ರತಿಭೆಯನ್ನು ಯಶಸ್ವಿಯಾಗಿ ಪ್ರದರ್ಶಿಸಿದ್ದಾರೆ.

ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ, ಆಡಳಿತ ಮಂಡಳಿಯ ಚೇರ್‌ಮನ್ ಡಾ. ಎಸ್.ಎ. ಪಾಟೀಲ ಹಾಗೂ ಸದಸ್ಯರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಸರ್ಕಾರಿ ಪಿಯು ಕಾಲೇಜು ಶೇ.61.36 ಫಲಿತಾಂಶ





■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದ ದ್ವಿತೀಯ ಪಿಯುಸಿ ಫಲಿತಾಂಶವು ಶೇ.61.36ರಷ್ಟಾಗಿ ಪ್ರಕಟವಾಗಿದೆ ಎಂದು ಪ್ರಾಚಾರ್ಯ ಎಸ್.ಸಿ. ಗುಳಗಣ್ಣವರ ತಿಳಿಸಿದ್ದಾರೆ.

ಒಟ್ಟು 88 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 54 ಮಂದಿ ಉತ್ತೀರ್ಣರಾಗಿದ್ದಾರೆ. ಇವರಲ್ಲಿ 2 ಮಂದಿ ಪ್ರಶಸ್ತಿ ಸಹಿತ ಪ್ರಥಮ ವರ್ಗದಲ್ಲಿ, 34 ಮಂದಿ ಪ್ರಥಮ ವರ್ಗದಲ್ಲಿ, 13 ಮಂದಿ ದ್ವಿತೀಯ ವರ್ಗದಲ್ಲಿ ಹಾಗೂ 5 ಮಂದಿ ಪಾಸು ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ.

ಕಲಾ ವಿಭಾಗದಲ್ಲಿ ಕೀರ್ತನಾ ನವಲಗುಂದ 520 ಅಂಕಗಳೊಂದಿಗೆ (ಶೇ.86.67) ಪ್ರಥಮ ಸ್ಥಾನ ಪಡೆದುಕೊಂಡಿದ್ದು, ಮಿನಹಾಜ ಹೊಸಮನಿ 511 ಅಂಕಗಳೊಂದಿಗೆ (ಶೇ.85.17) ದ್ವಿತೀಯ ಹಾಗೂ ಸುಷ್ಮಿತಾ ಬನ್ನಿಮರದ 488 ಅಂಕಗಳೊಂದಿಗೆ (ಶೇ.81.33) ತೃತೀಯ ಸ್ಥಾನ ಗಳಿಸಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಸಂಜನಾ 434 ಅಂಕಗಳೊಂದಿಗೆ (ಶೇ.72.33) ಪ್ರಥಮ ಸ್ಥಾನ ಪಡೆದರೆ, ಹೇಮಾ ಇಟಗಿ 409 ಅಂಕಗಳೊಂದಿಗೆ (ಶೇ.68.16) ದ್ವಿತೀಯ ಹಾಗೂ ಶ್ರೀಧರ ಹಿರೇಮಠ 407 ಅಂಕಗಳೊಂದಿಗೆ (ಶೇ.67.83) ತೃತೀಯ ಸ್ಥಾನ ಗಳಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಗಿರೀಶ ಕಮಲಾಪೂರ 486 ಅಂಕಗಳೊಂದಿಗೆ (ಶೇ.81) ಪ್ರಥಮ ಸ್ಥಾನ ಪಡೆದಿದ್ದು, ಫಾತಿಮಾ ಶಿರಗುಂಪಿ 445 ಅಂಕಗಳೊಂದಿಗೆ (ಶೇ.74.16) ದ್ವಿತೀಯ ಹಾಗೂ ರಮೇಶ್ ಚಲವಾದಿ 429 ಅಂಕಗಳೊಂದಿಗೆ (ಶೇ.71.5) ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಿಡಿಸಿ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಮತ್ತು ಸದಸ್ಯರು, ಜೊತೆಗೆ ಅಧ್ಯಾಪಕ ವರ್ಗದವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಶ್ರೀ ಯೋಗಿ ವೇಮನ ಪಿಯು ಕಾಲೇಜಿನಲ್ಲಿ ಉತ್ತಮ ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ಯೋಗಿ ವೇಮನ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ.

ಪರೀಕ್ಷೆಯಲ್ಲಿ 3 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 46 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಹಾಗೂ 21 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕಾಲೇಜಿನ ಒಟ್ಟು ಫಲಿತಾಂಶ ಶ್ರೇಯೋಭಿವೃದ್ಧಿಗೆ ಇದು ಸಾಕ್ಷಿಯಾಗಿದೆ.

ಕಲಾ ವಿಭಾಗದಲ್ಲಿ ಹಾಲೇಶ ಹಿರೇಮಠ ಶೇ.81.33 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದರೆ, ಶಿವಲೀಲಾ ಪಾಟೀಲ ಶೇ.77.66 ಅಂಕಗಳೊಂದಿಗೆ ದ್ವಿತೀಯ ಹಾಗೂ ರಕ್ಷಿತಾ ಭೋವಿ ಶೇ.70.16 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಪವನ ಮುಳಗುಂದ ಶೇ.96 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದು ಮೆರೆದಿದ್ದು, ಭೂಮಿಕಾ ಉಮ್ಮಣ್ಣವರ ಶೇ.85.15 ಅಂಕಗಳೊಂದಿಗೆ ದ್ವಿತೀಯ ಹಾಗೂ ಲಕ್ಷ್ಮಿ ಬೆಳಗಟ್ಟಿ ಶೇ.84.66 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ. ವಿಜ್ಞಾನ ವಿಭಾಗದಲ್ಲಿ ದ್ರಾಕ್ಷಾಯಣಿ ಭಾವಿ ಶೇ.86.33 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದುಕೊಂಡರೆ, ತುಳಸಿ ಕೆಲೂರ ಶೇ.78 ಅಂಕಗಳೊಂದಿಗೆ ದ್ವಿತೀಯ ಹಾಗೂ ಪೂಜಾ ಪುರದ ಶೇ.74.5 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕ ವೃಂದ ಹಾಗೂ ಆಡಳಿತ ಮಂಡಳಿ ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ವಾಣಿಜ್ಯ ವಿಭಾಗದಲ್ಲಿ ಉದಯ ತಳಗೇರಿ ಉತ್ತಮ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದಲ್ಲಿ ವಿದ್ಯಾರ್ಥಿ ಉದಯ ಉಮೇಶ ತಳಗೇರಿ ಶೇ.90ರಷ್ಟು (540 ಅಂಕ) ಪಡೆದು ಉತ್ತಮ ಸಾಧನೆ ಮಾಡಿದ್ದಾರೆ.

ಬೆಂಗಳೂರಿನ ಗ್ರಾಮಾಂತರ ಜಿಲ್ಲೆಯ ಆನೇಕಲ್ ತಾಲ್ಲೂಕಿನ ಬಂಡಾಪುರ ಗ್ರಾಮದ ಫಾಲೋಮ ಪಿಯು ಕಾಲೇಜಿನ ವಿದ್ಯಾರ್ಥಿಯಾಗಿರುವ ಉದಯ ತಳಗೇರಿ, ಮೂಲತಃ ಮುಂಡರಗಿ ತಾಲ್ಲೂಕಿನ ಡಂಬಳ ಗ್ರಾಮದ ಡಾ.




ಬಿ.ಆರ್. ಅಂಬೇಡ್ಕರ್ ನಗರದ ನಿವಾಸಿಯಾಗಿದ್ದು, ಪ್ರಸ್ತುತ ಬೆಂಗಳೂರಿನ ಗೊಲ್ಲಹಳ್ಳಿಯ ಪಟೇಲ್ ಹನಮರಡ್ಡಿ ಕಾಲೋನಿಯಲ್ಲಿ ವಾಸಿಸುತ್ತಿದ್ದಾರೆ.

ಅವರು ವಾಣಿಜ್ಯ ವಿಭಾಗದ ಪರೀಕ್ಷೆಯಲ್ಲಿ 540 ಅಂಕಗಳೊಂದಿಗೆ ಶೇ.90ರಷ್ಟು ಫಲಿತಾಂಶವನ್ನು ದಾಖಲಿಸುವ ಮೂಲಕ ತಮ್ಮ ಶೈಕ್ಷಣಿಕ ಸಾಮರ್ಥ್ಯವನ್ನು ಪ್ರದರ್ಶಿಸಿದ್ದಾರೆ. ಈ ಸಾಧನೆಯು ಕಾಲೇಜು ಮತ್ತು ಕುಟುಂಬ ವಲಯದಲ್ಲಿ ಸಂತೋಷಕ್ಕೆ ಕಾರಣವಾಗಿದೆ. ಉತ್ತಮ ಫಲಿತಾಂಶ ಸಾಧಿಸಿದ ವಿದ್ಯಾರ್ಥಿ ಉದಯ ತಳಗೇರಿಗೆ ಕಾಲೇಜಿನ ಪ್ರಾಚಾರ್ಯೆ ಉಮಾದೇವಿ ಪಾಟೀಲ ಹಾಗೂ ಬೋಧಕ ವರ್ಗದವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಹೊಳೆಇಟಗಿ ಪಿಯು ಕಾಲೇಜು ಶೇ.80 ಫಲಿತಾಂಶ: ಭಾಗ್ಯಲಕ್ಷ್ಮೀ ಪ್ರಥಮ ಸ್ಥಾನ







■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಹೊಳೆಇಟಗಿ ಗ್ರಾಮದ ಶ್ರೀಮತಿ ದಿ. ವೀರವ್ವ ಶಿವಪ್ಪ ಹುಲ್ಲಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಕಟವಾದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಕಾಲೇಜು ಶೇ.80ರಷ್ಟು ಫಲಿತಾಂಶ ದಾಖಲಿಸಿದೆ.

ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ತೋರಿದ್ದು, ಭಾಗ್ಯಲಕ್ಷ್ಮಿ ಎಣ್ಣಿ 539 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಶಾಂತಾ ಅಂಬಿಗೇರ 523 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಹಾಗೂ ರೇಣುಕಾ ಬಡಭೀಮಪ್ಪನವರ 505 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜಿನ ಅಭಿವೃದ್ಧಿ ಸಮಿತಿ ಪದಾಧಿಕಾರಿಗಳು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ಪ್ರಾಚಾರ್ಯ ಎಂ.ಆರ್. ಮೇಗಲಮನಿ ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಹೊಸ ಘಟಕ ಸ್ಥಾಪನೆಗೆ ಉತ್ತೇಜನ: ಸೆ. 30ರವರೆಗೆ ಯೋಜನೆ ಮುಂದುವರಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆತ್ಮನಿರ್ಭರ ಭಾರತ ಅಭಿಯಾನದ ಅಂಗವಾಗಿ 2020–21ನೇ ಸಾಲಿನಿಂದ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (ಪಿ.ಎಮ್.ಎಫ್.ಎಮ್.ಇ) ಯನ್ನು 2026ರ ಸೆಪ್ಟೆಂಬರ್ 30ರವರೆಗೆ ತಾತ್ಕಾಲಿಕವಾಗಿ ಮುಂದುವರಿಸಲಾಗಿದೆ.

ಬ್ಯಾಂಕುಗಳಲ್ಲಿ ಬಾಕಿ ಇರುವ ಅರ್ಜಿಗಳನ್ನು ಪೂರ್ಣಗೊಳಿಸುವುದಕ್ಕೂ ಹಾಗೂ ಹೊಸ ಅರ್ಜಿಗಳನ್ನು ತಡೆರಹಿತವಾಗಿ ಅನುಷ್ಠಾನಗೊಳಿಸುವುದಕ್ಕೂ ಎಲ್ಲಾ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಈ ಯೋಜನೆಯಡಿ ಸಾಲ ಸಂಪರ್ಕಿತ ಸಹಾಯಧನದೊಂದಿಗೆ ಹೊಸ ಆಹಾರ ಸಂಸ್ಕರಣ ಘಟಕಗಳನ್ನು ಸ್ಥಾಪಿಸುವುದು ಅಥವಾ ಈಗಿರುವ ಘಟಕಗಳನ್ನು ಉನ್ನತೀಕರಣ ಮಾಡುವ ಅವಕಾಶವಿದೆ. 18 ವರ್ಷ ಮೇಲ್ಪಟ್ಟ ಯಾವುದೇ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ಕನಿಷ್ಠ ವಿದ್ಯಾರ್ಹತೆಯ ನಿರ್ಬಂಧ ಇರುವುದಿಲ್ಲ.

ಗದಗ ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 271 ಘಟಕಗಳಿಗೆ ಸಾಲ ಮಂಜೂರಾಗಿದ್ದು, 2025–26ನೇ ಸಾಲಿನಲ್ಲಿ ಮಾತ್ರ 99 ಘಟಕಗಳಿಗೆ ಅನುಮೋದನೆ ದೊರೆತಿದೆ. ಯೋಜನೆಯಡಿ ರೊಟ್ಟಿ, ಶಾವಿಗೆ, ಹಪ್ಪಳ, ಚಕ್ಕಲಿ, ಹಿಟ್ಟು, ರವಾ, ಎಣ್ಣೆ, ಖಾರಪುಡಿ, ಮಸಾಲೆ ಪುಡಿ, ಚಟ್ನಿ ಪುಡಿ, ಉಪ್ಪಿನಕಾಯಿ, ಬೇಕರಿ ಪದಾರ್ಥಗಳು, ನಿಂಬೆ ಜಾಮ್, ಕುರುಕಲು ತಿಂಡಿಗಳು, ಹಣ್ಣು ಹಾಗೂ ತರಕಾರಿ ಸಂಸ್ಕರಣೆ, ಅರಿಶಿನ ಪುಡಿ, ಚುರುಮುರಿ, ಅವಲಕ್ಕಿ, ಪುಟಾಣಿ, ಹಾಲಿನ ಉತ್ಪನ್ನಗಳು ಹಾಗೂ ಪಶು ಆಹಾರ ಘಟಕಗಳನ್ನು ಆರಂಭಿಸಲು ಅವಕಾಶವಿದೆ.

ಅರ್ಜಿಯನ್ನು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳ ಮುಖಾಂತರ ಆನ್‌ಲೈನ್‌ನಲ್ಲಿ ಸಲ್ಲಿಸಬೇಕಾಗಿದ್ದು, ಅಗತ್ಯ ದಾಖಲೆಗಳಾಗಿ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ರೇಷನ್ ಕಾರ್ಡ್ ಅಥವಾ ವಿದ್ಯುತ್ ಬಿಲ್, ಬ್ಯಾಂಕ್ ಪಾಸ್ ಬುಕ್, ಕಳೆದ 6 ತಿಂಗಳ ಬ್ಯಾಂಕ್ ಸ್ಟೇಟ್‌ಮೆಂಟ್, ಘಟಕ ಸ್ಥಳದ ದಾಖಲಾತಿಗಳು (ಉತಾರ ಅಥವಾ ಬಾಡಿಗೆ ಕರಾರು ಪತ್ರ) ಹಾಗೂ ಜಿ.ಪಿ.ಎಸ್ ಲೊಕೇಶನ್ ಸಹಿತ ಅರ್ಜಿದಾರರ ಫೋಟೋ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಗದಗ ಅಥವಾ ಸಹಾಯಕ ಕೃಷಿ ನಿರ್ದೇಶಕಿ ಶ್ರೀಮತಿ ಸೀಮಾ ಸವಣೂರ (ಮೊ. 8277931425) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಬಿ.ಪಿ. ಅಳವಂಡಿ ಬಾಲಕಿಯರ ಪಿಯು ಕಾಲೇಜು ಶೇ.90 ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ಬಿ.ಪಿ. ಅಳವಂಡಿ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಕಟವಾದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷಾ ಫಲಿತಾಂಶದಲ್ಲಿ ವಿದ್ಯಾರ್ಥಿನಿಯರು ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಒಟ್ಟು 66 ವಿದ್ಯಾರ್ಥಿನಿಯರು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 61 ಮಂದಿ ಉತ್ತೀರ್ಣರಾಗುವ ಮೂಲಕ ಕಾಲೇಜು ಶೇ.90ರಷ್ಟು ಫಲಿತಾಂಶ ದಾಖಲಿಸಿದೆ. ಫಲಿತಾಂಶದಲ್ಲಿ 13 ವಿದ್ಯಾರ್ಥಿನಿಯರು ಉನ್ನತ ಶ್ರೇಣಿಯಲ್ಲಿ, 48 ವಿದ್ಯಾರ್ಥಿನಿಯರು ಪ್ರಥಮ ಶ್ರೇಣಿಯಲ್ಲಿ ಹಾಗೂ 5 ಮಂದಿ ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಕಲಾ ವಿಭಾಗದಲ್ಲಿ ಸುರೇಖಾ ಹೆಬಲಿ 571 ಅಂಕಗಳೊಂದಿಗೆ ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ರೇಣುಕಾ ವೆಂಕಟಾಪೂರ



565 ಅಂಕಗಳೊಂದಿಗೆ ದ್ವಿತೀಯ ಹಾಗೂ ರಂಜಿತಾ ಹವಳೆಪ್ಪಗೌಡರ 563 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಪ್ರೇಮಾ ಮುಂಡರಗಿ 537 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದರೆ, ಗಾಯತ್ರಿ ಪವಾರ 535 ಅಂಕಗಳೊಂದಿಗೆ ದ್ವಿತೀಯ ಹಾಗೂ ಸಾನಿಯಾ ನದಾಫ 511 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿನಿಯರ ಈ ಸಾಧನೆಗೆ ಕಾಲೇಜಿನ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳು ಹಾಗೂ ಪ್ರಾಚಾರ್ಯ ಎಂ.ಆರ್. ಮೇಗಲಮನಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# "ಅನುಕರಣೀಯ ಬದುಕಿನ ದೀಪ ಬಾವಿ ಬೆಟ್ಟಪ್ಪ"

## ಸಮಾಜ ಸೇವೆಗೆ ಜೀವನ ಅರ್ಪಿಸಿದ ಮಹನೀಯರಿಗೆ ಸುತ್ತೂರು ಸ್ವಾಮಿಗಳ ಶ್ಲಾಘನೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಸೇವಾ ದುರಂಧರ ಬಾವಿ ಬೆಟ್ಟಪ್ಪ ಅವರು ಸಮಾಜಕ್ಕಾಗಿ ತಮ್ಮ ಬದುಕನ್ನೇ ಅರ್ಪಿಸಿಕೊಂಡಿದ್ದು, ಅವರ ಜೀವನ ಇತರರಿಗೆ ಮಾದರಿಯಾಗಿದೆ ಎಂದು ಮೈಸೂರಿನ ಸುತ್ತೂರು ಮಠದ ಶಿವರಾತ್ರಿ ದೇಶೀಕೇಂದ್ರ ಸ್ವಾಮಿಗಳು ಹೇಳಿದರು.

ಪಟ್ಟಣದ ಪಂಚಮಸಾಲಿ ಭವನದಲ್ಲಿ ಬಾವಿ ಬೆಟ್ಟಪ್ಪ ಅವರ 80ನೇ ಜನ್ಮದಿನ ಹಾಗೂ 50ನೇ ವಿವಾಹ ವಾರ್ಷಿಕೋತ್ಸವದ ಅಂಗವಾಗಿ ನಡೆದ ಸಮಾರಂಭದಲ್ಲಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ "ಸಾವಿರ ಹೆಜ್ಜೆಗಳು" ಅಭಿನಂದನಾ ಗ್ರಂಥವನ್ನು ಬಿಡುಗಡೆ ಮಾಡಲಾಯಿತು.

ಸ್ವಾಮಿಗಳು ತಮ್ಮ ಭಾಷಣದಲ್ಲಿ ಬಾವಿ ಬೆಟ್ಟಪ್ಪ ಅವರ ಶಾಂತಿಯುತ ಜೀವನ



ಶೈಲಿ ಹಾಗೂ ಸಮಾಜಮುಖಿ ಸೇವೆಯನ್ನು ಶ್ಲಾಘಿಸಿದರು. ಅವರ ಜೀವನದ ಹೋರಾಟಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು. ಅವರು ಶತಮಾನೋತ್ಸವವನ್ನು ಕೂಡ ಆಚರಿಸಲಿ ಎಂಬ ಹಾರೈಕೆ ವ್ಯಕ್ತಪಡಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ನಿರ್ದೇಶಕರಾದ ಚೋರನೂರು ಕೊಟ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಬಾವಿ ಬೆಟ್ಟಪ್ಪ ಅವರು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿ ಸೈ ಎನ್ನಿಸಿಕೊಂಡಿದ್ದಾರೆ ಎಂದರು. ಪಂಚಮಸಾಲಿ ಸಮಾಜದ ರಾಜ್ಯಾಧ್ಯಕ್ಷರಾಗಿ ಹಾಗೂ ಪಟ್ಟಣದ ಹರ ಕಲ್ಯಾಣ ಮಂಟಪ (ಪಂಚಮಸಾಲಿ ಭವನ) ನಿರ್ಮಾಣದಲ್ಲಿ ಅವರ ಕೊಡುಗೆ ಅನನ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಶಿವಲೀಲ ಬಾವಿ ಬೆಟ್ಟಪ್ಪ ದಂಪತಿಗಳಿಗೆ ದಿವ್ಯ ಗುರುಗಳಿಂದ ಶ್ರೀರಕ್ಷೆ ಗೌರವ ಸಲ್ಲಿಸಲಾಯಿತು. ವೇದಿಕೆಯಲ್ಲಿ ಅವರ ಮೊಮ್ಮಗ ತಯಾರಿಸಿದ ದೃಶ್ಯ ಕಾವ್ಯ ಪ್ರದರ್ಶನಗೊಂಡಿದ್ದು, ಬಾವಿ ಬೆಟ್ಟಪ್ಪ ಅವರ ರಾಜಕೀಯ ಹಾಗೂ ಸಾಮಾಜಿಕ ಜೀವನದ ಹಲವು ಘಟ್ಟಗಳನ್ನು ಪರಿಚಯಿಸಲಾಯಿತು.

> "ನಮ್ಮ ತಂದೆಯವರ ಜೀವನವೇ ಒಂದು ಪಾಠಶಾಲೆಯಂತಿದೆ. ಅವರು ತೋರಿಸಿದ ಮೌಲ್ಯಗಳು, ಶಿಸ್ತು ಮತ್ತು ಸೇವಾ ಮನೋಭಾವ ನಮ್ಮ ಕುಟುಂಬಕ್ಕೆ ದಾರಿದೀಪವಾಗಿದೆ. 80 ವರ್ಷಗಳ ಜೀವನ ಪಯಣ ಹಾಗೂ 50 ವರ್ಷಗಳ ದಾಂಪತ್ಯ ನಮಗೆ ಹೆಮ್ಮೆ ತರುತ್ತದೆ,"
>
> **– ಬಾವಿ ಶಶಿಧರ.**

ಈ ಸಂದರ್ಭದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ನಿಜಲಿಂಗೇಶ್ವರ ಸ್ವಾಮಿಗಳು, ಅಭಿನವ ಸಂಗನಬಸವ ಶಿವಾಚಾರ್ಯ ಮಹಾಸ್ವಾಮಿಗಳು, ಶಿವಲಿಂಗ ರುದ್ರಮುನಿ ಮಹಾಸ್ವಾಮಿಗಳು, ಡಾ. ಮಹೇಶ್ವರ ಸ್ವಾಮಿಗಳು, ಇಮ್ಮಡಿ ಮಹಾಂತ ಸ್ವಾಮಿಗಳು, ಶಿವಮಹಾಂತ ಮಹಾಸ್ವಾಮಿಗಳು ಹಾಗೂ ಅಭಿನವ ಹಾಲಸಿದ್ದೇಶ್ವರ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಿರಿಯೂರಿನ ಮಾಜಿ ಸಚಿವ ಹೆಚ್. ಏಕಾಂತಯ್ಯ ಉಪಸ್ಥಿತರಿದ್ದರು. ಜವಳಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ ದೃಶ್ಯ ಚಿತ್ರಾವಳಿಗಳನ್ನು ಅನಾವರಣಗೊಳಿಸಿದರು. ಸಂಸದರಾದ ಬಸವರಾಜ್ ಬೊಮ್ಮಾಯಿ, ಬಸವರಾಜ್ ರಾಯರೆಡ್ಡಿ, ಶಾಸಕ ಕೆ. ನೇಮಿರಾಜ ನಾಯ್ಕ, ಮಾಜಿ ಸಂಸದ ಕರಡಿ ಸಂಗಣ್ಣ, ವೈ. ದೇವೇಂದ್ರಪ್ಪ, ಮಾಜಿ ಸಚಿವ ಎನ್.ಎಂ. ನಬಿ, ಇಟಗಿ ಕಲ್ಲೇಶಪ್ಪ, ಅಕ್ಕಿ ಶಿವಕುಮಾರ್, ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಅಕ್ಕಿ ತೋಟೇಶ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು.

## ಪ್ರೊ. ಪ್ರೇಮಾನಂದ ರೋಣದ ಅವರಿಗೆ ಬೀಳ್ಕೊಡುಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಒಬ್ಬ ವ್ಯಕ್ತಿ ಕಾಲೇಜಿನ ಪ್ರಾಚಾರ್ಯರಾಗಿ ಹೇಗೆ ಆಡಳಿತ ನಡೆಸಬೇಕು ಎಂಬುದಕ್ಕೆ ಪ್ರೊ. ಪ್ರೇಮಾನಂದ ರೋಣದ ಅವರು ಉತ್ತಮ ಮಾದರಿಯಾಗಿದ್ದಾರೆ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ ಹೇಳಿದರು.

ನಗರದ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾಗಿ 2023ರ ಶೈಕ್ಷಣಿಕ ವರ್ಷದಿಂದ ಅಧಿಕಾರ ವಹಿಸಿಕೊಂಡಿದ್ದ ಪ್ರೊ. ಪ್ರೇಮಾನಂದ ರೋಣದ ಅವರಿಗೆ ಆಯೋಜಿಸಲಾದ ಹೃದಯಸ್ಪರ್ಶಿ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು. ಪ್ರೊ. ರೋಣದ ಅವರು 2026ರ ಶೈಕ್ಷಣಿಕ ವರ್ಷದವರೆಗೆ ಕೇವಲ ಮೂರು ವರ್ಷಗಳ ಅವಧಿಯಲ್ಲಿ ಆಡಳಿತ ಮಂಡಳಿ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಪ್ರೀತಿಪಾತ್ರರಾಗಿ ಕಾರ್ಯ ನಿರ್ವಹಿಸಿದ್ದಾರೆ. ಅವರ ನಿಸ್ಪೃಹತೆ, ನಿಷ್ಠೆ ಹಾಗೂ ಸೇವಾ ಮನೋಭಾವವು ಅವರ ದಕ್ಷ ಆಡಳಿತಕ್ಕೆ ದರ್ಪಣವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

"ನಿಸ್ವಾರ್ಥ ಸೇವೆ ಮತ್ತು ದಕ್ಷ ಆಡಳಿತದಿಂದ ಪ್ರೊ. ಪ್ರೇಮಾನಂದ ರೋಣದ ಅವರು ಎಲ್ಲರ ಮನ ಗೆದ್ದಿದ್ದಾರೆ," ಎಂದು ಪ್ರೊ. ರಾಜೇಶ ಕುಲಕರ್ಣಿ ಹೇಳಿದರು. ಈ ಸಂದರ್ಭದಲ್ಲಿ ಪ್ರೊ. ಪ್ರೇಮಾನಂದ ರೋಣದ ಅವರು ಆಡಳಿತ ಮಂಡಳಿ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯಿಂದ ತಮಗೆ ಲಭಿಸಿದ ಸಹಕಾರವನ್ನು ಕೃತಜ್ಞತೆಯಿಂದ ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಗುರು-ಶಿಷ್ಯ ಬಾಂಧವ್ಯದ ಸ್ಮರಣೆ

## ಲಕ್ಕುಂಡಿಯಲ್ಲಿ ಐತಿಹಾಸಿಕ ಗುರುವಂದನಾ – 42 ವರ್ಷಗಳ ನಂತರ ಹಳೆಯ ವಿದ್ಯಾರ್ಥಿಗಳ ಸಮ್ಮೇಳನ




"42 ವರ್ಷಗಳ ನಂತರವೂ ನಾವು ಕಲಿಸಿದ ವಿದ್ಯಾರ್ಥಿಗಳು ನಮ್ಮ ಮೇಲೆ ಇಟ್ಟಿರುವ ಶ್ರದ್ಧೆ ಅವಿಸ್ಮರಣೀಯ. ಇಂತಹ ಬಾಂಧವ್ಯ ಎಲ್ಲೆಡೆ ಬೆಳೆದರೆ ಆರೋಗ್ಯಕರ ಸಮಾಜ ನಿರ್ಮಾಣವಾಗುತ್ತದೆ," ಎಂದು ವಿ.ಐ. ಬಡಿಗೇರ (ನಿವೃತ್ತ ಶಿಕ್ಷಕ) ಹೇಳಿದರು. "ಸುದೀರ್ಘ 42 ವರ್ಷಗಳ ಬಳಿಕ ನಡೆದ ಈ ಸಮಾಗಮ ಗ್ರಾಮಕ್ಕೆ ಹೆಮ್ಮೆಯ ವಿಷಯ. ನಾವು ಪಡೆದ ಜ್ಞಾನ ಇಂದು ನಮ್ಮ ಬದುಕಿಗೆ ದಾರಿ ತೋರಿಸಿದೆ," ಎಂದು ಸಣ್ಣವೀರಪ್ಪ ಬಣವಿ (ನಿವೃತ್ತ ಇಂಜಿನಿಯರ್) ಅಭಿಪ್ರಾಯಪಟ್ಟರು.

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶಿಕ್ಷಕರು ಮತ್ತು ಶಿಷ್ಯರ ನಡುವಿನ ಬಾಂಧವ್ಯ ಅಮೂಲ್ಯವಾಗಿದ್ದು, 42 ವರ್ಷಗಳ ಬಳಿಕವೂ ಅದನ್ನು ಜೀವಂತವಾಗಿಟ್ಟಿರುವುದು ಈ ಗುರುವಂದನಾ ಕಾರ್ಯಕ್ರಮದ ವಿಶೇಷತೆ ಎಂದು ಬೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಸ್ವಾಮೀಜಿಗಳು ಹೇಳಿದರು.

ಇಲ್ಲಿನ ಸರ್ಕಾರಿ ಪ್ರಾಥಮಿಕ ದ್ವಿಭಾಷಾ ಮಾಧ್ಯಮ ಮಕ್ಕಳ ಶಾಲೆಯ ಸಭಾಂಗಣದಲ್ಲಿ 1983-84ನೇ ಸಾಲಿನ 10ನೇ ತರಗತಿ ಹಳೆಯ ವಿದ್ಯಾರ್ಥಿಗಳ ಗೆಳೆಯರ ಬಳಗದಿಂದ ಆಯೋಜಿಸಲಾದ ಗುರುವಂದನಾ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ತಂತ್ರಜ್ಞಾನ ಯುಗದಲ್ಲಿಯೂ ಗುರು-ಶಿಷ್ಯ ಸಂಬಂಧವನ್ನು ಉಳಿಸಿಕೊಂಡಿರುವುದು ಶ್ಲಾಘನೀಯ ಎಂದು ಹೇಳಿದರು.

ಗದಗ ಗ್ರಾಮೀಣ ಬಿಇಒ ಬಿ.ವಿ. ನಡುವಿನಮನಿ ಮಾತನಾಡಿ, ಶಿಕ್ಷಕರ ಜೀವನಪೂರ್ತಿ ಸಮರ್ಪಣೆಗೆ ನೀಡಿದ ಈ ಗೌರವ ಸಮಾಜಕ್ಕೆ ಪ್ರೇರಣೆಯಾಗಿದೆ ಎಂದರು. ಉಪನ್ಯಾಸಕರಾದ ಷಣ್ಮುಖಪ್ಪ ಶಿಗ್ಲಿ ಹಾಗೂ ಬಿ.ಎಚ್. ಕಾಲವಾಡ ತಮ್ಮ ಅನುಭವಗಳನ್ನು ಹಂಚಿಕೊಂಡು, ಶಿಕ್ಷಕರ ಮಾರ್ಗದರ್ಶನದಿಂದ ಜೀವನ ರೂಪುಗೊಂಡಿದೆ ಎಂದು ತಿಳಿಸಿದರು. ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಶ್ರೀಗಳು ಹಾಗೂ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ ಸಹ ಮಾತನಾಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಯು.ಎಸ್. ಬೆಂತೂರ, ವಿ.ಐ. ಬಡಿಗೇರ, ವಿ.ಎಸ್. ಫಳಗಿ, ಎಂ.ಎಲ್. ತಳವಾರ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು. ಇದೇ ವೇಳೆ "ಬಾಗಿಲು ಬುತ್ತಿ" ಎಂಬ ಕವನ ಸಂಕಲನವನ್ನು ಲೋಕಾರ್ಪಣೆ ಮಾಡಲಾಯಿತು.

ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಗ್ರಾ.ಪಂ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ, ಅಶೋಕ ಬೂದಿಹಾಳ, ಪೀರಸಾಬ ನದಾಫ ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಶ್ರೀ ಅಭಿನವ ಅನ್ನದಾನೇಶ್ವರ ಪಪೂ ಕಾಲೇಜಿಗೆ ಶೇ.85.59 ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರೇಗಲ್ಲ ಪಟ್ಟಣದ ಶ್ರೀ ಅಭಿನವ ಅನ್ನದಾನೇಶ್ವರ ಪದವಿಪೂರ್ವ ಕಾಲೇಜು 2025-26ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶೇ.85.59ರ ಉತ್ತಮ ಸಾಧನೆ ದಾಖಲಿಸಿದೆ ಎಂದು ಪ್ರಾಚಾರ್ಯೆ ಅನಸೂಯಾ ಪಾಟೀಲ ತಿಳಿಸಿದ್ದಾರೆ.

ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಿಂದ ಒಟ್ಟು 118 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 101 ವಿದ್ಯಾರ್ಥಿಗಳು ಯಶಸ್ವಿಯಾಗಿ ಉತ್ತೀರ್ಣರಾಗಿದ್ದಾರೆ. ಹಲವಾರು ವಿಷಯಗಳಲ್ಲಿ ನೂರಕ್ಕೆ ನೂರು ಫಲಿತಾಂಶ ದಾಖಲಾಗಿರುವುದು ಕಾಲೇಜಿನ ಶೈಕ್ಷಣಿಕ ಗುಣಮಟ್ಟವನ್ನು ತೋರಿಸುತ್ತದೆ.

ವಿಭಾಗವಾರು ವಿವರಗಳಲ್ಲಿ ವಾಣಿಜ್ಯ ವಿಭಾಗ ಶೇ.84.21 ಹಾಗೂ ವಿಜ್ಞಾನ ವಿಭಾಗ ಶೇ.86.25 ಫಲಿತಾಂಶ ಸಾಧಿಸಿದೆ. ಒಟ್ಟು 18 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ವರ್ಗದಲ್ಲಿ, 59 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಹಾಗೂ 19 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಸಂಗೀತಾ ಗುಗ್ಗರಿ ಶೇ.96 (576/600) ಅಂಕಗಳೊಂದಿಗೆ ಕಾಲೇಜಿನ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಐಶ್ವರ್ಯ ಮಾಳೋತ್ತರ ಶೇ.93.5 ಮತ್ತು ಅಕ್ಷತಾ ಕಿತ್ತೂರ ಶೇ.91.83 ಅಂಕಗಳೊಂದಿಗೆ ಮುಂದಿನ ಸ್ಥಾನಗಳನ್ನು ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಹೂವಕ್ಕ ಭೀಮಪ್ಪನವರ ಶೇ.92.05 (555/600) ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ವಿನಯಕುಮಾರ, ಮನು ಮೇಟಿ ಹಾಗೂ ವಿಜಯಲಕ್ಷ್ಮಿ ಕಲಿಕೋಟಿ ಉತ್ತಮ ಅಂಕಗಳೊಂದಿಗೆ ಗಮನಾರ್ಹ ಸಾಧನೆ ಮಾಡಿದ್ದಾರೆ.

ಉತ್ತಮ ಫಲಿತಾಂಶಕ್ಕೆ ಕಾರಣರಾದ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕ ವೃಂದವನ್ನು ಸಂಸ್ಥೆಯ ಅಧ್ಯಕ್ಷ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹಾಗೂ ಆಡಳಿತ ಮಂಡಳಿ ಹೃತ್ಪೂರ್ವಕವಾಗಿ ಅಭಿನಂದಿಸಿದೆ ಎಂದು ಪ್ರಾಚಾರ್ಯರು ತಿಳಿಸಿದ್ದಾರೆ.

## ಕೂಡಲಸಂಗಮ ಶ್ರೀಗಳ ವಿರುದ್ಧ ಪಿತೂರಿ ತಕ್ಷಣ ನಿಲ್ಲಿಸಬೇಕು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಸದಾ ಪಂಚಮಸಾಲಿ ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಕೂಡಲಸಂಗಮದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿಗಳ ವಿರುದ್ಧ ವ್ಯವಸ್ಥಿತ ಪಿತೂರಿ ನಡೆಯುತ್ತಿದ್ದು ಇದನ್ನು ತಕ್ಷಣ ನಿಲ್ಲಿಸಬೇಕು ಎಂದು ಸಮಾಜದ ಯುವ ಮುಖಂಡ ರುದ್ರೇಶ ಕೊಟಗಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸ್ವಾಮೀಜಿಗಳ ವಿರುದ್ಧ ಕೆಲ ರಾಜಕಾರಣಿಗಳು ಹಾಗೂ ಅವರ ಬೆಂಬಲಿಗರು ಆಧಾರರಹಿತ ಆರೋಪಗಳನ್ನು ಮಾಡುತ್ತಾ ಮಾನಸಿಕ ಹಿಂಸೆ ನೀಡುತ್ತಿದ್ದಾರೆ. 2ಎ ಮೀಸಲಾತಿಗಾಗಿ ಸ್ವಾಮೀಜಿಗಳು ರಾಜ್ಯಾದ್ಯಂತ ಸಾವಿರಾರು ಕಿಲೋಮೀಟರ್ ಸಂಚರಿಸಿ ಸಮಾಜವನ್ನು ಸಂಘಟಿಸಿರುವುದು ಎಲ್ಲರಿಗೂ ತಿಳಿದಿದೆ ಎಂದು ಹೇಳಿದರು.

ಸಮಾಜವನ್ನು ಬಲಪಡಿಸುವ ಕಾರ್ಯದಲ್ಲಿ ತೊಡಗಿರುವ ಸ್ವಾಮೀಜಿಗಳ ವಿರುದ್ಧ ಇಂತಹ ಆರೋಪಗಳು ಸರಿಯಲ್ಲ. ಇದರ ಹಿಂದೆ ಯಾರಿದ್ದಾರೆ ಎಂಬುದು ಸಮಾಜಕ್ಕೆ ಸ್ಪಷ್ಟವಾಗಿದೆ. ಈ ಪಿತೂರಿ ಮುಂದುವರಿದರೆ ಸಮಾಜದ ಭಕ್ತರು ಹಾಗೂ ಸಮಾಜ ಬಾಂಧವರು ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ರುದ್ರೇಶ ಕೊಟಗಿ ಎಚ್ಚರಿಕೆ ನೀಡಿದ್ದಾರೆ.

## ಸಂವಿಧಾನ ಶಿಲ್ಪಿಗೆ ಗೌರವ ನಮನ

▶▶ ಮೊದಲನೇ ಪುಟದಿಂದ

ಮಂಡಲ ಅಧ್ಯಕ್ಷ ಸುರೇಶ್ ಮರಳಪ್ಪನವರ ಮಾತನಾಡಿ, ಸಂವಿಧಾನ ರಚನೆಯಲ್ಲಿ ಅಂಬೇಡ್ಕರ್ ಅವರ ಪಾತ್ರ ಅಪಾರವಾಗಿದ್ದು, ದೀನದಲಿತರ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ಅವರು ಬಲವಾದ ಆಧಾರ ನೀಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಕ್ಷದ ಹಿರಿಯರು, ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಂವಿಧಾನದಿಂದ ಸಮಾನತೆ ಸಾಧ್ಯ

### ಪರಾಪೂರ ಕಚೇರಿಯಲ್ಲಿ ಡಾ. ಅಂಬೇಡ್ಕರ್ ಜಯಂತಿ ಅದ್ದೂರಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ



ನಗರಸಭೆ ಹತ್ತಿರದಲ್ಲಿರುವ ಪರಾಪೂರ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತ್ಯುತ್ಸವನ್ನು ವಿನಾಯಕ ಪರಾಪೂರ ಅವರ ನೇತೃತ್ವದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ವಿನಾಯಕ ಪರಾಪೂರ ಅವರು, ಭಾರತದಲ್ಲಿರುವ ಪ್ರತಿಯೊಬ್ಬರೂ ಸಮಾನತೆಯಿಂದ ಬದುಕಬೇಕು ಎಂಬುದು ಅಂಬೇಡ್ಕರ್ ಅವರ ಕನಸಾಗಿತ್ತು. ಆ ದಿಕ್ಕಿನಲ್ಲಿ ಅವರು ಜಗತ್ತಿನ ವಿವಿಧ ದೇಶಗಳಲ್ಲಿ ಅಧ್ಯಯನ ನಡೆಸಿ ಸಂವಿಧಾನವನ್ನು ರಚಿಸಿದರು. ಆ ಸಂವಿಧಾನದ ಮೂಲಕ ನಾವೆಲ್ಲರೂ ಸಮಾನ ಹಕ್ಕುಗಳೊಂದಿಗೆ ಬದುಕುತ್ತಿದ್ದೇವೆ ಎಂದು ಹೇಳಿದರು.

ಅಂಬೇಡ್ಕರ್ ಅವರು ಸಂವಿಧಾನ ಶಿಲ್ಪಿ, ಸಮಾಜ ಸುಧಾರಕ, ಅರ್ಥಶಾಸ್ತ್ರಜ್ಞ ಹಾಗೂ ನ್ಯಾಯಶಾಸ್ತ್ರಜ್ಞರಾಗಿದ್ದು, ದಲಿತರು ಮತ್ತು ಮಹಿಳೆಯರ ಹಕ್ಕುಗಳಿಗಾಗಿ ಹೋರಾಡಿದ ಮಹಾನ್ ನಾಯಕರು. ಅಸ್ಪೃಶ್ಯತಾ ನಿವಾರಣೆ, ಕಾರ್ಮಿಕ ಸುಧಾರಣೆ ಹಾಗೂ ಬೌದ್ಧ ಧರ್ಮದ ಅಳವಡಿಕೆಯ ಮೂಲಕ ಸಮಾಜದಲ್ಲಿ ಮಹತ್ತರ ಬದಲಾವಣೆ ತಂದಿದ್ದಾರೆ. ಭಾರತದ ಮೊದಲ ಕಾನೂನು ಮಂತ್ರಿಯಾಗಿ ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ್ದಾರೆ ಎಂದು ವಿವರಿಸಿದರು.

ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾಗಿ ಜಾತಿ, ಧರ್ಮ ಹಾಗೂ ಲಿಂಗ ಭೇದವಿಲ್ಲದೆ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆಧಾರದ ಮೇಲೆ ಸಂವಿಧಾನವನ್ನು ರೂಪಿಸಿದ ಮಹಾನ್ ವ್ಯಕ್ತಿತ್ವ ಅವರದು ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ಕೊರವರ, ಸುರ್ಜಿತಸಿಂಗ್ ಬ್ಯಾಳಿ, ಅರವಿಂದ ಗಾಗಡೆ, ಬಸವರಾಜ ಹೊಸಮನಿ, ಸಿದ್ದಣ್ಣ ಗೋಶಲ್ಯನವರ, ಮಂಜುನಾಥ ಕೌಜಗೇರಿ, ಬಸಣ್ಣ ಹೊಸಮನಿ, ದ್ಯಾವನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಜಾತಿ ವ್ಯವಸ್ಥೆಯ ವಿರುದ್ಧ ಅಂಬೇಡ್ಕರ್ ನಿರಂತರ ಹೋರಾಟ ನಡೆಸಿ, 1956ರಲ್ಲಿ ತಮ್ಮ ಅನುಯಾಯಿಗಳೊಂದಿಗೆ ಬೌದ್ಧ ಧರ್ಮವನ್ನು ಸ್ವೀಕರಿಸಿದರು,"
> – ಗುರುಶಾಂತಪ್ಪ ದೊಡ್ಡಮನಿ, ಮುಖಂಡ.

> "'ಶಿಕ್ಷಿತರಾಗಿ, ಸಂಘಟಿತರಾಗಿ, ಹೋರಾಡಿ' ಎಂಬ ಮಂತ್ರದ ಮೂಲಕ ದಲಿತರಲ್ಲಿ ಜಾಗೃತಿ ಮೂಡಿಸಿದ ಅಂಬೇಡ್ಕರ್ ಅವರನ್ನು ಪ್ರತಿದಿನ ಸ್ಮರಿಸಬೇಕು,"
> – ರಾಜು ಖಾನಪ್ಪನವರ, ಹೋರಾಟಗಾರ.

## ಸನ್ಮಾರ್ಗ ಕಾಲೇಜಿಗೆ ಪ್ರವೇಶಕ್ಕಾಗಿ ಭಾರೀ ಸ್ಪರ್ಧೆ

### 500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಂದ ಪ್ರವೇಶ ಪರೀಕ್ಷೆ



■ ವಿಜಯಸಾಕ್ಷಿ ಸುದ್ದಿ, ಗದಗ

2025-2026ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶ್ರೇಷ್ಠ ಸಾಧನೆಗೈದ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯವು ಇದೀಗ ಪ್ರಥಮ ಪಿಯುಸಿ ವಿಜ್ಞಾನ ವಿಭಾಗ ಪ್ರವೇಶಕ್ಕಾಗಿ ಪ್ರವೇಶ ಪರೀಕ್ಷೆ ನಡೆಸಿದ್ದು, ವಿದ್ಯಾರ್ಥಿಗಳಿಂದ ಭಾರೀ ಪ್ರತಿಕ್ರಿಯೆ ವ್ಯಕ್ತವಾಗಿದೆ.

ದಿನಾಂಕ 11/04/2026 ರಂದು ನಡೆದ ಪ್ರವೇಶ ಪರೀಕ್ಷೆಗೆ ಸುಮಾರು 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಜರಾಗಿದ್ದು, ಕಾಲೇಜಿನ ಶೈಕ್ಷಣಿಕ ಗುಣಮಟ್ಟ ಹಾಗೂ ಫಲಿತಾಂಶದ ಮೇಲಿನ ನಂಬಿಕೆಯನ್ನು ಸ್ಪಷ್ಟಪಡಿಸಿದೆ. ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳ ಜೊತೆಗೆ ಪಾಲಕರ ಉತ್ಸಾಹಪೂರ್ಣ ಪಾಲ್ಗೊಳ್ಳಿಕೆ ಗಮನಸೆಳೆದಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ ಅವರು, ಸನ್ಮಾರ್ಗ ಕಾಲೇಜಿನ ಮೇಲೆ ವಿಶ್ವಾಸವಿಟ್ಟು ತಮ್ಮ ಮಕ್ಕಳ ಪ್ರವೇಶಕ್ಕಾಗಿ ಆಗಮಿಸಿದ ಎಲ್ಲ ಪಾಲಕರಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದರು. ಕಾಲೇಜು ಶೈಕ್ಷಣಿಕ ಹಾಗೂ ಸಾಂಸ್ಕೃತಿಕವಾಗಿ ವಿದ್ಯಾರ್ಥಿಗಳನ್ನು ಸಮಗ್ರವಾಗಿ ರೂಪಿಸಲು ಸದಾ ಬದ್ಧವಾಗಿದೆ ಎಂದು ಅವರು ತಿಳಿಸಿದರು.

ಬೋಧನಾ ಗುಣಮಟ್ಟದ ಕುರಿತು ಪ್ರೊ. ರೋಹಿತ್ ಒಡೆಯರ್ ವಿವರ ನೀಡಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಾದ ಅಇಖಿ ಮತ್ತು ಓಇಇಖಿ ಗೆ ವಿಶೇಷ ತರಬೇತಿ ನೀಡಲಾಗುವುದು ಎಂದು ಪ್ರೊ. ಪುನೀತ್ ದೇಶಪಾಂಡೆ ತಿಳಿಸಿದರು.

ಸಾರಿಗೆ, ಶುಲ್ಕ ಹಾಗೂ ಮೂಲಸೌಕರ್ಯಗಳ ಕುರಿತು ಆಡಳಿತಾಧಿಕಾರಿ ಶ್ರೀ ಎಂ.ಸಿ. ಹಿರೇಮಠ ವಿವರಿಸಿದರು. ಕಾಲೇಜಿನ ಆಡಳಿತ ಮಂಡಳಿ ಪದಾಧಿಕಾರಿಗಳು, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಬಸವಣ್ಣನವರ ಕೊಡುಗೆ ಕನ್ನಡ ಸಂಸ್ಕೃತಿಗೆ ಅಮೂಲ್ಯ: ಸುಧಾ ಹುಚ್ಚಣ್ಣವರ

■ ವಿಜಯಸಾಕ್ಷಿ ಸುದ್ದಿ, ಗದಗ



ಸಮಾಜದಲ್ಲಿ ಆಳವಾಗಿ ಬೇರೂರಿದ್ದ ಅಸಮಾನತೆಯನ್ನು ಕಿತ್ತೊಗೆಯುವ ಮೂಲಕ ಮನುಷ್ಯರೆಲ್ಲ ಒಂದೇ ಎಂಬ ಸಂದೇಶವನ್ನು ಜಗತ್ತಿಗೆ ನೀಡಿದ ವಿಶ್ವಗುರು ಬಸವಣ್ಣನವರ ಕೊಡುಗೆ ಕನ್ನಡ ನೆಲದ ಶ್ರೀಮಂತ ಸಂಸ್ಕೃತಿಗೆ ಅಪಾರವಾಗಿದೆ ಎಂದು ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಆಯೋಜಿಸಲಾದ ಕಾಯಕ ಜೀವಿ ಸದಾನಂದ ಪಿಳ್ಳಿ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಸವಣ್ಣನವರು ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಬೀಜ ಬಿತ್ತಿದವರು. ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಸಮಾನತೆಯ ಹೊಸ ದಾರಿಯನ್ನು ತೋರಿದರು. ವಚನ ಸಾಹಿತ್ಯವನ್ನು ಓದಿ ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಬಸವಾದಿ ಶರಣರ ತತ್ವಗಳನ್ನು ಸಾಕಾರಗೊಳಿಸಬೇಕಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಪತ್ರಕರ್ತ ಶಿವಾನಂದ ಹಿರೇಮಠ ಅವರು, ಪತ್ರಕರ್ತರು ಮತ್ತು ಸಾಹಿತಿಗಳು ಸಮಾಜದ ಒಳಿತಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ತನಿಖಾ ವರದಿಗಳಿಂದ ಕೆಲವೊಮ್ಮೆ ಒತ್ತಡ ಎದುರಾದರೂ, ಸಮಾಜದ ಓರೆಕೋರೆಗಳನ್ನು ಸರಿಪಡಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದ ಅವರು, ಜಂಟಿ ಕಾರ್ಯಕ್ರಮಗಳ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಬಸವಣ್ಣನವರು ಭಾಷಾ, ರಾಜಕೀಯ, ಆರ್ಥಿಕ, ಸಾಹಿತ್ಯ, ಧಾರ್ಮಿಕ ಹಾಗೂ ಸಾಮಾಜಿಕ ಸಂಸ್ಕೃತಿಗೆ ಹೊಸ ದಿಕ್ಕು ನೀಡಿದ ಮಹಾನ್ ಚಿಂತಕರಾಗಿದ್ದಾರೆ. ಅವರು ವಿಶ್ವಮಾನ್ಯ ಸತ್ಯಗಳನ್ನು ಪ್ರತಿಪಾದಿಸಿದ ಸಾಂಸ್ಕೃತಿಕ ನಾಯಕ ಎಂದು ಹೇಳಿದರು.

ಮುಖ್ಯ ಅತಿಥಿ ಡಾ. ಸಹನಾ ಸದಾನಂದ ಪಿಳ್ಳಿ ಅವರು ಬೇಸಿಗೆ ಸಂದರ್ಭದಲ್ಲಿ ಆರೋಗ್ಯ ಕಾಪಾಡಿಕೊಳ್ಳುವ ಕ್ರಮಗಳು, ನೀರಿನ ಕೊರತೆಯಿಂದ ಉಂಟಾಗುವ ಸಮಸ್ಯೆಗಳು ಹಾಗೂ ಆರೋಗ್ಯಕರ ಜೀವನಶೈಲಿಯ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ದತ್ತಿ ದಾನಿಗಳಾದ ಸುರೇಖಾ ಸದಾನಂದ ಪಿಳ್ಳಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕೆ. ಎಚ್. ಬೇಲೂರ, ಜಿ.ಬಿ. ಪಾಟೀಲ, ಅನ್ನದಾನಿ ಹಿರೇಮಠ, ಶಂಕರಪ್ಪ ಗಾಂಜಿ, ರಶ್ಮಿ ಅಂಗಡಿ, ಅಮರೇಶ ರಾಂಪೂರ, ಶೈಲಜಾ ಗಿಡ್ನಂದಿ, ಸಿ.ಎಂ. ಮಾರನಬಸರಿ, ಜಯಶ್ರೀ ಪಟ್ಟಣಶೆಟ್ಟಿ, ಬಿ.ಬಿ. ಹೊಳಗುಂದಿ, ಅಶೋಕ ಸತ್ಯರೆಡ್ಡಿ, ಭಾರತಿ ಕೋಟಿ, ಅಶೋಕ ಅಂಗಡಿ, ಕಲ್ಲೇಶ ಮೂರಶಿಳ್ಳಿನ, ಜೆ.ಎ. ಪಾಟೀಲ ಸೇರಿದಂತೆ ಹಲವರು ಹಾಜರಿದ್ದರು.

## ಎ.19ರಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪದಗ್ರಹಣ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪದಾಧಿಕಾರಿಗಳ ಪದಗ್ರಹಣ ಹಾಗೂ ತರಬೇತಿ ಕಾರ್ಯಕ್ರಮ ಎಪ್ರಿಲ್ 19, 2026ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ನಡೆಯಲಿದೆ ಎಂದು ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, ಕಾಂಗ್ರೆಸ್ ಪ್ರಚಾರ ಸಮಿತಿ ರಾಜ್ಯಾಧ್ಯಕ್ಷ ವಿನಯಕುಮಾರ ಸೊರಕೆ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು ಎಂದು ತಿಳಿಸಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಕಾಂಗ್ರೆಸ್ ಪ್ರಚಾರ ಸಮಿತಿ ಉಪಾಧ್ಯಕ್ಷ ಮುನೀರ, ಮುಖ್ಯ ಸಂಯೋಜಕ ಶಂಭು ಶೆಟ್ಟಿ, ಸಂಯೋಜಕಿ ಸುರೇಖಾ ಪೂಜಾರ, ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಇದೇ ವೇಳೆ ವಿವಿಧ ಘಟಕಗಳ ಅಧ್ಯಕ್ಷರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್, ಪರಿಶಿಷ್ಟ ಜಾತಿ□ಪಂಗಡ, ಓಬಿಸಿ, ಅಲ್ಪಸಂಖ್ಯಾತ, ಕಿಸಾನ್, ಸೇವಾದಳ ಸೇರಿದಂತೆ ವಿವಿಧ ಘಟಕಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**"ಶಿಕ್ಷಣವೇ ಅಂಬೇಡ್ಕರ್ ಸಂದೇಶ" – ಜಯಂತಿ ಆಚರಣೆಯಲ್ಲಿ ಅರವಿಂದ ವಡ್ಡರ**

# ಅಂಬೇಡ್ಕರ್ ತತ್ವಾದರ್ಶ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಶ್ರೇಷ್ಠ ವ್ಯಕ್ತಿಗಳ ಆದರ್ಶಗಳನ್ನು ಕೇಳುವುದಷ್ಟೇ ಸಾಕಾಗುವುದಿಲ್ಲ, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ನಿಜವಾದ ಗೌರವ ನೀಡಿದಂತಾಗುತ್ತದೆ ಎಂದು ಉಪನ್ಯಾಸಕ ಅರವಿಂದ ವಡ್ಡರ ಹೇಳಿದರು.



ಪಟ್ಟಣದ ತಹಸೀಲ್ದಾರ್ ಕಚೇರಿ ಆವರಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಪುರಸಭೆ ಗಜೇಂದ್ರಗಡ ಇವರ ಸಹಯೋಗದಲ್ಲಿ ಸಂವಿಧಾನ ಶಿಲ್ಪಿ, ಮಹಾಮಾನವತಾವಾದಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಹಸಿರು ಕ್ರಾಂತಿ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪ ಪ್ರಧಾನಿ ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಭಾರತದ ಏಕತೆ, ವೈವಿಧ್ಯತೆ, ಸಮಗ್ರತೆ ಹಾಗೂ ಸಮಾನತೆಗೆ ಅಪಾರ ಕೊಡುಗೆ ನೀಡಿದ ಮಹಾನ್ ನಾಯಕರು. ಶೋಷಿತ ವರ್ಗವನ್ನು ಮುಖ್ಯವಾಹಿನಿಗೆ ತರಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಅವರು "ಶಿಕ್ಷಣ–ಸಂಘಟನೆ–ಹೋರಾಟ" ಎಂಬ ಮೂಲ ಮಂತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿದ್ದರು. ಆದರೆ ಇಂದಿನ ಸಮಾಜದಲ್ಲಿ ಶಿಕ್ಷಣವನ್ನು ಕಡೆಗಣಿಸಿ ಉಳಿದ ಅಂಶಗಳಿಗೆ ಹೆಚ್ಚು ಒತ್ತು ನೀಡುತ್ತಿರುವುದು ವಿಷಾದನೀಯ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪಿ.ಎಸ್.ಐ ಪ್ರಕಾಶ್ ಡಿ ಮಾತನಾಡಿ, ಅಂಬೇಡ್ಕರ್ ಅವರು ರೂಪಿಸಿದ ಸಂವಿಧಾನ ಇಡೀ ವಿಶ್ವಕ್ಕೆ ಮಾದರಿಯಾಗಿದ್ದು, ಅನೇಕ ರಾಷ್ಟ್ರಗಳು ಅದನ್ನು ತಮ್ಮ ಸಂವಿಧಾನಗಳಲ್ಲಿ ಅಳವಡಿಸಿಕೊಂಡಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಸವರಾಜ ಬಳಗಾನೂರ, ಮರಿಯಪ್ಪ ಹೆಚ್., ಚಂದ್ರಶೇಖರ ಕಂದಕೂರ್, ವಿಜಯ್ ಕುಮಾರ್, ಮಲ್ಲೇಶ್ ಪಜ್ಜಿ, ಶರಣಪ್ಪ ಬೆಟಗೇರಿ, ಮಹಾಂತೇಶ ಹಾದಿಮನಿ, ಶ್ರೀಮತಿ ಗೀತಾ ಟಿ. ಆಲೂರ್, ರೂಪೇಶ್ ರಾಠೋಡ, ದುಗರಪ್ಪ ಸಂದಿಮನಿ, ಡಿ.ಜಿ. ಕಟ್ಟಿಮನಿ, ರವಿ ಗಡೆದವರ್, ಬಸವರಾಜ ಬಂಕದ, ಪೀರು ರಾಠೋಡ, ಮಾರುತಿ ಹಾದಿಮನಿ, ಹನುಮಂತ ಪೂಜಾರ, ಕನಕಪ್ಪ ಕಲ್ಲೊಡರ್, ಪ್ರಕಾಶ್ ರಾಠೋಡ, ಲಕ್ಷ್ಮಣ ಬಂಕದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> "ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಮಹನೀಯರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ,"
>
> **– ಅರವಿಂದ ವಡ್ಡರ,** ಉಪನ್ಯಾಸಕರು.

ಈ ಸಂದರ್ಭದಲ್ಲಿ ತೆರೆದ ವಾಹನದಲ್ಲಿ ಮಹನೀಯರ ಭಾವಚಿತ್ರಗಳನ್ನು ಹೊತ್ತು ಡಾ. ಅಂಬೇಡ್ಕರ್ ವೃತ್ತದಿಂದ ಗಜೇಂದ್ರಗಡ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ತಹಶೀಲ್ದಾರ್ ಕಚೇರಿವರೆಗೆ ಭವ್ಯವಾಗಿ ಕರೆತರುವ ಮೂಲಕ ಜಯಂತಿ ಆಚರಣೆಗೆ ವಿಶೇಷ ಮೆರುಗು ನೀಡಲಾಯಿತು.

## ತೆರಿಗೆಗಳನ್ನು ಸರಿಯಾದ ಸಮಯಕ್ಕೆ ಪಾವತಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹೊಸ ಆರ್ಥಿಕ ವರ್ಷ ಆರಂಭವಾಗುವ ಈ ಸಂದರ್ಭದಲ್ಲಿ ನಾಗರಿಕರು ತಮ್ಮ ತೆರಿಗೆಗಳನ್ನು ಸರಿಯಾದ ಸಮಯಕ್ಕೆ ಪಾವತಿಸುವ ಮೂಲಕ ಸರ್ಕಾರ ನೀಡುವ ರಿಯಾಯಿತಿಗಳ ಸದುಪಯೋಗ ಪಡೆಯಬೇಕು ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ಪಟ್ಟಣದ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯಲ್ಲಿ ಮಾತನಾಡಿದ ಅವರು, ತೆರಿಗೆ ಪಾವತಿಯಿಂದ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮ ಕೊಡುಗೆ ನೀಡಿದಂತಾಗುತ್ತದೆ. ಆಸ್ತಿ ತೆರಿಗೆ, ವಾಹನ ತೆರಿಗೆ ಸೇರಿದಂತೆ ಎಲ್ಲ ವಿಧದ ತೆರಿಗೆಗಳನ್ನು ಸಮಯಕ್ಕೆ ಪಾವತಿಸಿ ನೆಮ್ಮದಿಯಿಂದ ಬದುಕಬೇಕು ಎಂದು ಅವರು ಸಲಹೆ ನೀಡಿದರು.

ಇದೇ ವೇಳೆ ಅವರು, ನಮ್ಮ ಕ್ಯಾಂಟೀನ್ ಅನ್ನು ಹಿಂದೆ ಧಾರವಾಡದಿಂದ ಬಾಗಲಕೋಟೆಗೆ ವರ್ಗಾಯಿಸಲಾಗಿತ್ತು. ಆದರೆ ಸಂಘದ ಒತ್ತಾಯದ ಹಿನ್ನೆಲೆಯಲ್ಲಿ ಮತ್ತೆ ಧಾರವಾಡ ಕೇಂದ್ರವನ್ನೇ ಮುಂದುವರಿಸಲು ಅವಕಾಶ ದೊರೆತಿದೆ. ಇದರಿಂದ ಸದಸ್ಯರು ಈಗ ಮತ್ತೆ ಧಾರವಾಡ ಕ್ಯಾಂಟೀನ್‌ನಿಂದಲೇ ಸಾಮಗ್ರಿಗಳನ್ನು ಪಡೆಯಬಹುದು ಎಂದು ತಿಳಿಸಿದರು.

ಬೇಸಿಗೆ ಆರಂಭವಾಗಿರುವುದರಿಂದ ಬಿಸಿಲಿನ ತೀವ್ರತೆ ಹೆಚ್ಚಾಗುತ್ತಿದೆ. ಆದ್ದರಿಂದ ಸದಸ್ಯರು ತಮ್ಮ ಹಾಗೂ ಕುಟುಂಬದ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು. ಮಧ್ಯಾಹ್ನದ ಬಿಸಿಲಿನಲ್ಲಿ ಹೊರಗೆ ಹೋಗುವುದನ್ನು ಕಡಿಮೆ ಮಾಡಬೇಕು ಹಾಗೂ ಮಕ್ಕಳನ್ನು ಬಿಸಿಲಿನಲ್ಲಿ ಆಟವಾಡಲು ಬಿಡಬಾರದು ಎಂದು ಹೇಳಿದರು.

ಸಭೆಯಲ್ಲಿ ಶಿವಪ್ಪ ಸೋಮಾಪೂರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಪ್ರಭುದೇವ ಮುಕ್ಕನಗೌಡ್ರ, ಉಮೇಶ ಕರಮುಡಿ, ದಾವಲಸಾಬ ಕಿಲ್ಲೇದಾರ, ಗುರುಶಾಂತಗೌಡ ಮಲ್ಲನಗೌಡ್ರ, ಶಶಿಕಾಂತ ಕರಡಿ, ಈರಪ್ಪ ದೊಡ್ಡಣ್ಣವರ, ಬಸವೇಶ್ವರ ಚಿಕ್ಕೊಪ್ಪದ, ಮಂದಾಲಪ್ಪ ಸಂಗನಾಳ, ಈಶ್ವರಚಂದ್ರ ಬಾಗಲಿ, ಶಿವಾನಂದ ಬಂಡಿಹಾಳ, ಕುಮಾರಸ್ವಾಮಿಕ ಹಿರಧಾನ್ಯಮಠ, ದಾದಾಸಾಬ ನದಾಫ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಗದಗ:** ನಗರಸಭೆ ಆವರಣದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ, ಮಹಾಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಆರ್.ಎಲ್. ಮೇಳೆನವರ, ಬೂದಪ್ಪ ಹುಣಸಿಮರದ, ಮಲ್ಲೇಶ ಹುಲಕೋಟಿ, ಜಗದೀಶ್ ಹೆಬಸೂರ, ಹೊಳೆಬಸಪ್ಪ ಅಕ್ಕಿ, ಹುಲ್ಲೇಶ ಭಜಂತ್ರಿ, ಬಸವರಾಜ ಪೂಜಾರ, ಅಶೋಕ ಮುಳಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.



## ಅಂಬೇಡ್ಕರ್ ತತ್ವಗಳಿಂದ ನವ ಭಾರತ ನಿರ್ಮಾಣಕ್ಕೆ ಬದ್ಧರಾಗೋಣ

▶▶ಮೊದಲನೇ ಪುಟದಿಂದ

ವಿಶ್ವದ ಅತ್ಯುತ್ತಮ ಸಂವಿಧಾನವನ್ನು ದೇಶಕ್ಕೆ ನೀಡಿ ಪ್ರತಿಯೊಬ್ಬ ಪ್ರಜೆಗೂ ಸಮಾನ ಹಕ್ಕು ಹಾಗೂ ಸ್ವಾಭಿಮಾನದ ಬದುಕಿಗೆ ಮೂಲಾಧಾರ ನಿರ್ಮಿಸಿದ್ದಾರೆ ಎಂದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ನಾಗರಾಜ ಮಡಿವಾಳ ಮಾತನಾಡಿ, ಅಂಬೇಡ್ಕರ್ ದೇಶಕ್ಕೆ ಸಲ್ಲಿಸಿದ ಸೇವೆ ಹಾಗೂ ಸಮ ಸಮಾಜಕ್ಕಾಗಿ ಮಾಡಿದ ತ್ಯಾಗವನ್ನು ಸ್ಮರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಸಹಾಯಕ ಪ್ರಾಧ್ಯಾಪಕ ಪೃಥ್ವಿರಾಜ ಎನ್ ಮಹನೀಯರ ಕುರಿತು ಉಪನ್ಯಾಸ ನೀಡಿದರು.

ಪಿಎಸ್ಐ ನಾಗರಾಜ ಗಡದ ಹಾಗೂ ಹಿರಿಯ ಮುಖಂಡ ಕೋಟೆಪ್ಪ ವರ್ದಿ ಮಾತನಾಡಿ, ಅಂಬೇಡ್ಕರ್ ಭವ್ಯ ಭಾರತದ ಮುಳುಗದ ಸೂರ್ಯ ಎಂದು ಹೇಳಿದರು. ಇದೇ ವೇಳೆ ಸಮಾಜ ಕಲ್ಯಾಣ ಇಲಾಖೆಯ ಎಂ.ಎಸ್. ಸಂಕನೂರ ಅವರು ಭಾರತದ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಸಿಡಿಪಿಓ ಮೃತ್ಯುಂಜಯ ಜಿ., ಎಪಿಎಂಸಿ ಕಾರ್ಯದರ್ಶಿ ಎಂ.ಎಸ್. ಹಳೆಮನಿ, ಹೆಸ್ಕಾಂ ಎಇಇ ಆಂಜನೆಯಪ್ಪ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡಾದರಿ, ಮಾಜಿ ಸೈನಿಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ದಲಿತಪರ ಸಂಘಟನೆಗಳ ಮುಖಂಡರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು. ತಾಪಂ ಇಒ ಕೃಷ್ಣಪ್ಪ ಧರ್ಮರ ಪ್ರಾಸ್ತಾವಿಕ ನುಡಿದರು. ಸಮಾಜ ಕಲ್ಯಾಣ ಇಲಾಖೆಯ ಬಸವರಾಜ ಹಡಪದ, ಕಣ್ಣಪ್ಪ ತಳವಾರ ಹಾಗೂ ಶಿಕ್ಷಕ ಉಮೇಶ್ ನೇಕಾರ ಕಾರ್ಯಕ್ರಮ ನಿರೂಪಿಸಿದರು.

## ಮೇ.1ರಂದು ಉಚಿತ ಶಿವದೀಕ್ಷೆ ಕಾರ್ಯಕ್ರಮ

▶▶ಮೊದಲನೇ ಪುಟದಿಂದ

ಮುದುಕೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು (ವಿರುಪಾಪುರ),ಶ್ರೀ ಗುರುಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು (ಜಿಗೇರಿ), ಶ್ರೀ ಶಿವಕುಮಾರ ಶರಣರು (ವೀರೇಶ್ವರ ಮಹಾಶರಣರ ಮಠ, ನರಸಾಪೂರ) ಹಾಗೂ ಋಷಿಕುಮಾರ ಮಹಾಸ್ವಾಮಿಗಳು (ಗುಳಗುಳಿ) ಸೇರಿದಂತೆ ಅನೇಕ ಮಠಾಧೀಶರು ಸಾನ್ನಿಧ್ಯ ವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಕುಮಾರಸ್ವಾಮಿ ಹಿರೇಮಠ, ವಿರಯ್ಯ ಹೊಸಮಠ, ಸಂಗಮ್ಮ ಹಿರೇಮಠ, ತೋಟಯ್ಯ ಗುಡ್ಡಿಮಠ, ಮಂಜುನಾಥ ಹಳ್ಳೂರಮಠ, ಫಕ್ಕಿರಯ್ಯ ಹಿರೇಮಠ, ಕುಮಾರ ದೇವದುರ್ಗಮಠ, ಉಮಾಪತಿ ಭುಸನೂರಮಠ, ಮಲ್ಲಯ್ಯ ಶಿರೋಳಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಅಂಬೇಡ್ಕರ್ ಭವ್ಯ ಭಾರತದ ದೊಡ್ಡ ಶಕ್ತಿ



■ವಿಜಯಸಾಕ್ಷಿ ಸುದ್ದಿ, ರೋಣ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಭವ್ಯ ಭಾರತ ದೇಶದ ಅತ್ಯಂತ ದೊಡ್ಡ ಶಕ್ತಿಯಾಗಿದ್ದಾರೆ. ಅವರು ಇಡೀ ವಿಶ್ವವೇ ಮೆಚ್ಚುವಂತಹ ಸಂವಿಧಾನವನ್ನು ದೇಶಕ್ಕೆ ನೀಡಿದ್ದಾರೆ ಎಂದು ತಹಸೀಲ್ದಾರ್ ನಾಗರಾಜ ಕೆ. ಹೇಳಿದರು.

ಅವರು ಮಂಗಳವಾರ ತಾಲೂಕಾಡಳಿತ ವತಿಯಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್ ಅವರು "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ತತ್ವದಡಿಯಲ್ಲಿ ಸಂವಿಧಾನವನ್ನು ರೂಪಿಸಿ, ಪ್ರತಿಯೊಬ್ಬ ನಾಗರಿಕನಿಗೂ ಗೌರವಯುತ ಬದುಕು ದೊರಕುವಂತೆ ಬಲಿಷ್ಠ ಕಾನೂನು ವ್ಯವಸ್ಥೆಯನ್ನು ನಿರ್ಮಿಸಿದ್ದಾರೆ ಎಂದು ಹೇಳಿದರು.

ಬಾಬು ಜಗಜೀವನ ರಾಮ್ ಅವರು ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗಳನ್ನು ತಂದು, ದೇಶವನ್ನು ಸಂಕಷ್ಟದಿಂದ ಅಭಿವೃದ್ಧಿಯತ್ತ ಕೊಂಡೊಯ್ದ ಮಹಾನ್ ನಾಯಕರು ಎಂದರು.

ಕಾರ್ಯಕ್ರಮದಲ್ಲಿ ಜೆ. ಬಿ. ಗುಡಿಮನಿ ಹಾಗೂ ಪುಂಡಲಿಕ ಮಾದರ ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯಾಧಿಕಾರಿ ರಮೇಶ್ ಹೊಸಮನಿ, ಪಿಎಸ್ಐ ಪ್ರಕಾಶ ಬಣಕಾರ, ವಿ.ಬಿ. ಸೋಮನಕಟ್ಟಿಮಠ, ಸಂಜಯ ದೊಡ್ಡಮನಿ, ಸೋಮು ನಾಗರಾಜ, ಪ್ರಕಾಶ ಹೊಸಳ್ಳಿ, ಬಸವರಾಜ ತಳವಾರ, ದೇವೇಂದ್ರಪ್ಪ ಕೊಳಪ್ಪನವರ, ಬಸವರಾಜ ಕಾಳೆ, ಬಿಸಿಎಂ ಇಲಾಖೆ ಅಧಿಕಾರಿಗಳು ಹಾಗೂ ದಲಿತ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

**ವಿದ್ಯಾರ್ಥಿಗಳಿಗೆ ಆರೋಗ್ಯ ಜಾಗೃತಿ ಅಭಿಯಾನ – ದಿನನಿತ್ಯ ನಡೆ ಅಭ್ಯಾಸಕ್ಕೆ ಉತ್ತೇಜನ**

## ಆರೋಗ್ಯಕರ ಜೀವನಕ್ಕೆ ಪ್ರತಿದಿನ ಹತ್ತು ಸಾವಿರ ಹೆಜ್ಜೆಗಳು




■ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಪ್ರತಿದಿನ ಕನಿಷ್ಠ ಹತ್ತು ಸಾವಿರ ಹೆಜ್ಜೆಗಳು ನಡೆಯುವ ಅಭ್ಯಾಸವನ್ನು ಬೆಳೆಸಿಕೊಂಡರೆ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯೆ ಡಾ. ಸುಧಾ ಕೌಜಗೇರಿ ಹೇಳಿದರು.

ಕಾಲೇಜಿನಲ್ಲಿ ವಿಶ್ವ ಆರೋಗ್ಯ ದಿನಾಚರಣೆ–2026ರ ಅಂಗವಾಗಿ ಆಯೋಜಿಸಿದ್ದ 'ಆರೋಗ್ಯಕರ ನಡೆ ಅಭಿಯಾನ 10,000 ಹೆಜ್ಜೆಗಳ ಚಾಲೆಂಜ್' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನಿಯಮಿತ ನಡೆ ಹೃದಯ ಸಂಬಂಧಿ ಕಾಯಿಲೆಗಳು, ಮಧುಮೇಹ ಹಾಗೂ ಒತ್ತಡವನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಸಂಯೋಜಕಿ ಸಾವಿತ್ರಿ ಟಿ. ಮಾತನಾಡಿ, ಇಂದಿನ ಯಾಂತ್ರಿಕ ಜೀವನಶೈಲಿಯಿಂದ ದೈಹಿಕ ಚಟುವಟಿಕೆಗಳು ಕಡಿಮೆಯಾಗುತ್ತಿದ್ದು, ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದಿನನಿತ್ಯ ಕನಿಷ್ಠ 10,000 ಹೆಜ್ಜೆಗಳು ನಡೆಯುವ ಅಭ್ಯಾಸವನ್ನು ರೂಢಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಮಾತನಾಡಿ, ನಡೆ ವ್ಯಾಯಾಮ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿ ದೇಹದ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ತಿಳಿಸಿದರು.

ಮಹಾನಂದಾ ಹಿರೇಮಠ, ಸಂತೋಷಕುಮಾರ ಲಮಾಣಿ, ವಿಜಯಕುಮಾರ ಎಸ್., ಡಾ. ಶೋಭಾ ಅಡಕಿ, ಡಾ. ಮಂಜುನಾಥ ತ್ಯಾಲಗಡಿ, ರೋಹಿಣಿ ರಾಚಣ್ಣವರ, ಡಾ. ಅರುಣಕುಮಾರ, ಬಸವರಾಜ ಬಳಗಾನೂರಮಠ, ರಮೇಶ ಹುಲಕುಂದ, ಶಬ್ಬೀರಭಾಷಾ ಆಲೂರು ಅವರ ನೇತೃತ್ವದಲ್ಲಿ ನಡೆದ ಆರೋಗ್ಯ ಜಾಗೃತಿ ಜಾಥಾದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು.

> "ನಿಯಮಿತ ನಡೆ ದೇಹಕ್ಕೂ ಮನಸ್ಸಿಗೂ ಶಕ್ತಿ ನೀಡುತ್ತದೆ, ವಿದ್ಯಾರ್ಥಿಗಳು ಅದನ್ನು ದಿನಚರಿಯ ಭಾಗವಾಗಿಸಬೇಕು,"
>
> **– ಡಾ. ಸುಧಾ ಕೌಜಗೇರಿ.**

## ಡಾ. ಬಿ.ಆರ್. ಅಂಬೇಡ್ಕರ್ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಗ್ರಾಮದ ಶಾಲೆಯಲ್ಲಿ ಭಾರತರತ್ನ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆರಂಭಿಸಲಾಯಿತು. ನಂತರ ಅವರ ಜೀವನ, ಶಿಕ್ಷಣ, ಹೋರಾಟ ಮತ್ತು ಸಂವಿಧಾನ ನಿರ್ಮಾಣದ ಸಾಧನೆಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

ಅಂಬೇಡ್ಕರ್ ಅವರು 1891 ಎಪ್ರಿಲ್ 14ರಂದು ಮಧ್ಯಪ್ರದೇಶದ ಮಹೋದಲ್ಲಿ ಜನಿಸಿದರು. ತಮ್ಮ ಬಾಲ್ಯದಿಂದಲೇ ಶಿಕ್ಷಣದತ್ತ ಹೆಚ್ಚಿನ ಆಸಕ್ತಿ ಹೊಂದಿದ್ದ ಅವರು ಸತಾರ, ಮುಂಬೈ ಹಾಗೂ ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆದು ಅನೇಕ ಪದವಿಗಳನ್ನು ಪಡೆದರು. ನಂತರ ಕಾನೂನು ತಜ್ಞರಾಗಿ, ಅರ್ಥಶಾಸ್ತ್ರಜ್ಞರಾಗಿ ಹಾಗೂ ಸಮಾಜ ಸುಧಾರಕರಾಗಿ ದೇಶಕ್ಕೆ ಮಹತ್ವದ ಸೇವೆ ಸಲ್ಲಿಸಿದರು.

1947ರಲ್ಲಿ ಕೇಂದ್ರ ಸರ್ಕಾರದಲ್ಲಿ ಕಾನೂನು ಸಚಿವರಾಗಿ ಕಾರ್ಯನಿರ್ವಹಿಸಿದ ಅವರು, ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾಗಿ ಭಾರತೀಯ ಸಂವಿಧಾನ ರಚನೆಯಲ್ಲಿ ಪ್ರಮುಖ ಪಾತ್ರ ವಹಿಸಿದರು. 1950ರಲ್ಲಿ ಸಂವಿಧಾನ ಜಾರಿಗೆ ಬಂದಿತು. ಇಂತಹ ಸಂವಿಧಾನ ಶಿಲ್ಪಿ ಡಾ–ಕ್ಟರ್ ಬಿ ಆರ್ ಅಂಬೇಡ್ಕರವರ ಜನ್ಮದಿನಾಚರಣೆ ಆಚರಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯಾಗಿದೆ.

ಇವರು 6 ಡಿಸೆಂಬರ್ 1956 ರಂದು ದೆಹಲಿಯ ತಮ್ಮ ನಿವಾಸದಲ್ಲಿ ನಿಧನರಾಗಿದ್ದು ಅಂದು ಇಡೀ ಜಗತ್ತೇ ಕಂಬನಿ ಮಿಡಿದಿದೆ. ಇವರಿಗೆ 1990 ರಲ್ಲಿ ಮರಣೋತ್ತರವಾಗಿ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

"ಶಿಕ್ಷಣವೇ ಜೀವನದ ಅಸ್ತ್ರ" ಎಂಬ ಅವರ ಸಂದೇಶ ಹಾಗೂ ಸಮಾನತೆ, ನ್ಯಾಯ ಮತ್ತು ಹಕ್ಕುಗಳ ಕುರಿತ ಚಿಂತನೆಗಳು ವಿದ್ಯಾರ್ಥಿಗಳಿಗೆ ಮಾರ್ಗದರ್ಶಕವಾಗಿವೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯ ಹಾಲೇಶ ಎಸ್. ಜಕ್ಕಲಿ, ಶಿಕ್ಷಕರಾದ ನೇಮೇಶ ಯರಗುಪ್ಪಿ, ರಾಘವೇಂದ್ರ ಸಾಂಗ್ಲಿಕರ ಹಾಗೂ ಗ್ರಾಮಸ್ಥರು, ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka